# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 104 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 08-11-2024 ಶುಕ್ರವಾರ | ಪುಟ: 4 | ಬೆಲೆ : ರೂ.2-00

Volume - 02 Issue - 104 | RNI No: KARKAN/2023/88462 | Chitradurga | Date: 08-11-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬಾಲ್ಯವಿವಾಹ ತಡೆದು, ಸಾಮಾಜಿಕ ಪಿಡುಗು ತೊಲಗಿಸಿ 2

ವಾದಾ ದಿಯಾ- ಪೂರಾ ಕಿಯಾ: ಸಿ.ಎಂ.ಸಿದ್ದರಾಮಯ್ಯ 3

ಅಪ್ರಾಪ್ತ ಬಾಲಕಿ ವಿವಾಹಕ್ಕೆ ತಡೆ: ಸಮಿತಿಯಲ್ಲಿ ವಿಚಾರಣೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಅಂತರಾಷ್ಟ್ರೀಯ ದತ್ತು ಮಾಸಾಚರಣೆ

» **ಚಿತ್ರದುರ್ಗ**

ಪ್ರತಿ ವರ್ಷದಂತೆ ಈ ವರ್ಷವೂ ಸಹ 2024ನೇ ವರ್ಷದ ನವೆಂಬರ್ ತಿಂಗಳನ್ನು ಅಂತರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಪ್ರತಿ ಮಗುವೂ ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು. ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಹಾಗೂ ಒಪ್ಪಿಸಲ್ಪಟ್ಟ ಮಕ್ಕಳ ಪುನರ್ವಸತಿಗೆ ನೆರವಾಗುವುದು ಮಕ್ಕಳ ರಕ್ಷಣಾ ನಿರ್ದೇಶನಾಲಯದ ಯೋಜನೆಯ ಉದ್ದೇಶವಾಗಿದೆ. ಅಂತರಾಷ್ಟ್ರೀಯ ದತ್ತು ಮಾಸಾಚರಣೆ ನವೆಂಬರ್-2024ರ ಅಂಗವಾಗಿ ಪೋಷಕತ್ವ ಯೋಜನೆ, ಕಾನೂನು ಬದ್ಧ ದತ್ತು ಹಾಗೂ ಕಾನೂನು ಬಾಹಿರ ದತ್ತು ಪ್ರಕ್ರಿಯೆ ಅಪರಾಧ ಮಕ್ಕಳ ಮಾರಾಟ ಅಪರಾಧ "ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯ ಕಾಯ್ದೆ 2015 ಸೆಕ್ಷನ್ 80, 81ರ ಅನ್ವಯ 5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ ರೂ.1 ಲಕ್ಷ ದಂಡ ವಿಧಿಸಬಹುದು. ಈ ಅಪರಾಧದಲ್ಲಿ ಆಸ್ಪತ್ರೆಯವರು ಶಾಮಿಲಾಗಿದ್ದರೆ ಶಿಕ್ಷೆಯ ಅವಧಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆ" ಸಾರ್ವಜನಿಕರ ಗಮನಕ್ಕೆ ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿ ಕಂಡುಬಂದಲ್ಲಿ ಚಿತ್ರದುರ್ಗ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ದೂರವಾಣಿ ಸಂಖ್ಯೆ 08194-295822ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಪ್ರಕಟಣೆಯಲ್ಲಿ ಕೋರಿದ್ದಾರೆ.

### ಚಿತ್ರದುರ್ಗ ನಗರಸಭೆ: ಪ್ರೋತ್ಸಾಹ ಹಾಗೂ ಸಹಾಯಧನಕ್ಕಾಗಿ ಅರ್ಜಿ

» **ಚಿತ್ರದುರ್ಗ**

ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ 2024-25ನೇ ಸಾಲಿಗೆ ಚಿತ್ರದುರ್ಗ ನಗರಸಭೆ ನಿಧಿಯಡಿ ಕ್ರೀಯಾ ಯೋಜನೆ ರೂಪಿಸಿ ಪ್ರೋತ್ಸಾಹ ಹಾಗೂ ಸಹಾಯಕ ಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. 2024ರ ಡಿಸೆಂಬರ್ 07 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ.ನಗರಸಭೆಯ ನಿಧಿಯ ಶೇಕಡ 24.10 ಮತ್ತು 7.25 ಕ್ರಿಯಾ ಯೋಜನಡೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ, ಎಸ್.ಎಸ್.ಎಲ್.ಸಿ ಇಂದ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲಾಗುವುದು. ಶೇ.5ರ ಕ್ರೀಯಾ ಯೋಜನೆಯಡಿ ಅಂಗವಿಕಲರು, ಪೋಲೀಯೊಗೆ ತುತ್ತಾದವರಿಗೆ ಕೃತಕ ಪಾದ ಮತ್ತು ಇತರೆ ಅಂಗಾಗಗಳ ಜೋಡಣೆಗೆ ತಗಲುವ ಮೊತ್ತಕ್ಕೆ ಸಹಾಯಧನ ನೀಡಲಾಗುವುದು.ಅರ್ಜಿ ನಮೂನೆ ಮತ್ತು ಬಾಕಿ ಉಳಿದಿರುವ ಅನುದಾನ ವಿವಿಧ ಸೌಲಭ್ಯಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ನಗರಸಭೆ ಕಚೇರಿಯ ವಿಷಯ ನಿರ್ವಾಹಕರು ಅಥವಾ ವೆಬ್ ಸೈಟ್ www.chitradurgacity.mrc.gov.in ಭೇಟಿ ನೀಡಬಹುದು. ಚಿತ್ರದುರ್ಗ ನಗರ ವ್ಯಾಪ್ತಿಯ ಸಾರ್ವಜನಿಕರು ನಿಗಧಿತ ಅರ್ಜಿ ನಮೂನೆಯೊಂದಿಗೆ ಅಗತ್ಯ ದಾಖಲೆಗಳನ್ನು ಕಡೆಯ ದಿನದ ಒಳಗಾಗಿ ಸಲ್ಲಿಸುವಂತೆ ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿನಲ್ಲಿ ಸಿ.ಇ.ಟಿ, ಹಾಗೂ ಎನ್.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್ ಹಾಗೂ ಪಿ.ಹೆಚ್.ಡಿನಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.1,00,000/-ಗಳ ಸಾಲವನ್ನು ಶೇ.2ರ ಬಡ್ಡಿದರದಲ್ಲಿ ಶೈಕ್ಷಣಿಕ ಸಾಲ ಸೌಲಭ್ಯ ನೀಡಲು ಆ□□ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 18 ರಿಂದ 35 ವರ್ಷದ ಒಳಗಿನವರಾಗಿ, ಕುಟುಂಬದ ವಾರ್ಷಿಕ ಆದಾಯ ರೂ.6 ಲಕ್ಷಗಳ ಮಿತಿಯೊಳಗಿರಬೇಕು. ವಿದ್ಯಾಭ್ಯಾಸ ಪೂರ್ಣಗೊಂಡ 4 ತಿಂಗಳ ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು. ಅಸಕ್ತರು ಡಿಸೆಂಬರ್ 15 ರೊಳಗಾಗಿ kacdc.karnataka.gov.ind ವೆ□□ಸೈಟ್ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 08192230934 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕಿ ರೂಪ ಎಸ್.ಟಿ ತಿಳಿಸಿದ್ದಾರೆ.

# ಜಗತ್ತಿನ ಸಂವಿಧಾನದ ತಾಯಿ ವಚನಗಳು

» **ಹೊಸದುರ್ಗ**

ಜಗತ್ತಿನ ಎಲ್ಲ ಸಂವಿಧಾನದ ತಾಯಿ ವಚನಗಳು. ಆದರೆ ಅವುಗಳನ್ನು ಜಗತ್ತಿಗೆ ನಾವು ಪ್ರತಿಪಾದಿಸುತ್ತಿಲ್ಲ. ಏಕೆಂದರೆ ವಚನಗಳನ್ನು ನಾವು ಸರಿಯಾಗಿ ಓದಿಲ್ಲ ಎಂದು ಹಿರಿಯ ಸಾಹಿತಿ, ಚಿಂತಕ ರಂಜಾನ್ ದರ್ಗಾ ವಿಷಾದ ವ್ಯಕ್ತಪಡಿಸಿದರು.

ತಾಲೂಕಿನ ಸಾಣೆಹಳ್ಳಿಯಲ್ಲಿ ನಡೆಯುತ್ತಿರುವ ರಾಷ್ಟೀಯ ನಾಟಕೋತ್ಸವ ಅಂಗವಾಗಿ ಇಲ್ಲಿನ ಎಸ್.ಎಸ್.ಒಳಾಂಗಣ ರಂಗಮಂದಿರದಲ್ಲಿ ಗುರುವಾರ ಆಯೋಜಿಸಿದ್ದ □ಧರ್ಮ ಮತ್ತು ಮಾನವ ಹಕ್ಕುಗಳು□ ಕುರಿತ ವಿಚಾರ ಸಂಕಿರಣದಲ್ಲಿ ಲಿಂಗಾಯತ ಧರ್ಮ ಕುರಿತು ಅವರು ಮಾತನಾಡಿದರು.

ಲಿಂಗಾಯತ ಎಂದರೇನು? ಆಯತ ಎಂದರೆ ಪ್ರಿಯವಾದುದು. ಲಿಂಗಾಯತರು ಎಂದರೆ ಲಿಂಗಕ್ಕೆ ಪ್ರಿಯರಾದವರು, ದೇವರಿಗೆ ಪ್ರಿಯರಾದವರು. ಲಿಂಗಾಯತ ಎಂದರೆ ಜೀವನ ವಿಧಾನ. ದೇವರಿಗೆ ಪ್ರಿಯವಾಗುವ ಹಾಗೆ ಬದುಕುವ ವಿಧಾನ. ಲಿಂಗಾಯತದಲ್ಲಿ ಸ್ವರ್ಗವಿಲ್ಲ, ನರಕವಿಲ್ಲ, ದೇವರಿಲ್ಲ. ದೇವರು ನಮ್ಮ ದೇಹವೆಂಬ ದೇವಾಲಯದಲ್ಲಿದ್ದಾನೆ. ಅಂತಃಸಾಕ್ಷಿಯಾಗಿ ಬದುಕುವವರು ಲಿಂಗಾಯತರು. ಲಿಂಗಾಯತ ಎಂದರೆ ದೇವರಿಗೆ ಪ್ರಿಯನಾದವನು ಎಂದು ವಿವರಿಸಿದರು.

ಮೊದಲನೇ ಮಹಾಯುದ್ಧದಲ್ಲಿ ಒಂದೂವರೆ ಕೋಟಿ, ಎರಡನೆ ಮಹಾಯುದ್ಧದಲ್ಲಿ 5 ಕೋಟಿಗೂ ಹೆಚ್ಚು ಜನರು ಸತ್ತರು. ಇವರೆಲ್ಲ ಯುದ್ಧ ಮಾಡಿ ಸಾಯಲಿಲ್ಲ. ಅಮಾಯಕರಾಗಿದ್ದರು. ಹೀಗೆ ಆರೂವರೆ ಕೋಟಿ ಜನರನ್ನು ಕಳೆದುಕೊಂಡ ಮೇಲೆ ವಿಶ್ವಸಂಸ್ಥೆ ಅಸ್ತಿತ್ವಕ್ಕೆ



ಬಂತು. ನಂತರ ಮಾನವಹಕ್ಕುಗಳ ಕುರಿತು ಚರ್ಚೆ ಶುರುವಾಯಿತು. ಆದರೆ ಮಾನವಹಕ್ಕುಗಳ ಕುರಿತು ಮಾತನಾಡಿದ ಶರಣರ ಕಗ್ಗೊಲೆಯಾಯಿತು. ಇದರಿಂದ ಶರಣರು ವಚನಗಳನ್ನು ಕಳೆದುಕೊಂಡರು. ಇದನ್ನು ಕಲ್ಯಾಣಕ್ರಾಂತಿ ಎನ್ನುತ್ತೇವೆ. ಆದರೆ ನಿಜವಾಗಿಯೂ ಅಲ್ಲಿ ಶರಣರಹತ್ಯೆಯಾಯಿತು.

ಮಾನವಹಕ್ಕುಗಳ ಕುರಿತು ಮಾತಾಡಿದ್ದಕ್ಕೆ ಅವರ ಹತ್ಯೆಯಾಯಿತು. ಯಾವುದೇ ವಚನ ಓದಿದರೂ ಮಾನವಹಕ್ಕುಗಳ ಕುರಿತ ಪ್ರಸ್ತಾಪವಿದೆ ಎಂಬುದನ್ನು ಅರಿಯಬೇಕಿದೆ ಎಂದು ವಿವರಿಸಿದರು.

ಮಹಿಳೆಯರ, ದಲಿತರ, ಶೋಷಿತರ ಕುರಿತು ವಚನಗಳಲ್ಲಿ ಕಾಣಬಹುದು. 12ನೇ ಶತಮಾನದಲ್ಲಿಯೇ ಬಸವಣ್ಣನವರು ಮಾನವಹಕ್ಕುಗಳ ಕುರಿತು ಮಾತನಾಡಿದರು. ಹಾಗೆಯೇ ಬಸವಣ್ಣನವರು ಸ್ತ್ರೀವಾದಿ ಚಿಂತನ ಹರಿಬಿಟ್ಟ ಪರಿಣಾಮ ನಮ್ಮ ಮಹಿಳೆಯರಿಗೆ ಸಮಾನತೆ ಸಾಧ್ಯವಾಗಿದೆ. ಇದಕ್ಕಾಗಿ ಬಸವತತ್ವವನ್ನು ಜಗತ್ತಿಗೆ ಹೇಗೆ ಮುಟ್ಟಿಸಬೇಕು ಎನ್ನುವುದನ್ನು ಚಿಂತಿಸಬೇಕು ಎಂದು ಸಲಹೆ ನೀಡಿದರು.

ಇದಕ್ಕೂ ಮೊದಲು ಜೈನ ಧರ್ಮದ ಕುರಿತು ಬ್ರಹ್ಮದೇವ ಹಡಲಗಿ ಮಾತನಾಡಿ, ಶಾಂತಿ, ಸಹಬಾಳ್ವೆ ಎನ್ನುವುದು ಜೈನಧರ್ಮದ ಮಹಾತತ್ವ. ಕೊಲೆ, ಹೊಡೆ ಎನ್ನುವ ಶಬ್ದಗಳಿಗೆ ಜೈನ ಧರ್ಮದ ಶಬ್ದಕೋಶದಲ್ಲಿ ಜಾಗವಿಲ್ಲ ಎಂದರು.

ಬೌದ್ಧ ಧರ್ಮದ ಕುರಿತು ಕವಿ ಡಾ.ಮೂಡ್ನಾಕೂಡು ಚಿನ್ನಸ್ವಾಮಿ ಮಾತಾನಾಡಿ, ಬುದ್ಧ ಕಂಡು ಹಿಡಿದ ಧರ್ಮ ಕೇವಲ ಮನುಷ್ಯರಿಗೆ ಮತ್ತು ಧರ್ಮಕ್ಕೆ ಸಂಬಂಧಿಸಿದ್ದು. ಸ್ವರ್ಗ, ನರಕವೆಂಬ ಅಲೌಕಿಕವಾದುದನ್ನು ಬೋಧಿಸುವುದಿಲ್ಲ. ಲೌಕಿಕತೆ ಕುರಿತೇ ಬುದ್ಧ ಪ್ರತಿಪಾದಿಸುತ್ತಾನೆ ಎಂದರು.

ಇಸ್ಲಾಂ ಧರ್ಮ ಕುರಿತು ಮಹಮ್ಮದ್ ಕುಂಣಟಿಜಜಜಿಟಿಜಜ ಮಾತನಾಡಿ, ಈ ಭೂಮಿಯ ಮೇಲೆ ಪ್ರತಿಯೊಬ್ಬರಿಗೂ ಬದುಕುವ ಹಕ್ಕಿದೆ ಎಂದು ಇಸ್ಲಾಂ ಧರ್ಮ ಸಾರುತ್ತಿದೆ. ಆದರೆ ಕೊಲೆ ಮಾಡುವುದು ಎಂದರೆ ದೈಹಿಕವಾಗಿ ಹಲ್ಲೆ ಮಾಡುವ ಮೂಲಕವಲ್ಲ. ಬರಹ, ಭಾಷಣ, ಚಟುವಟಿಕೆಗಳ ಮೂಲಕ ಕೊಲೆ ಮಾಡಬಹುದು. ಹೀಗಾಗಿ ನಮ್ಮ ಜೀವಗಳಿಗೆ ಬೆಲೆಯಿದೆ. ಘನತೆಯೊಂದಿಗೆ, ಗೌರವದೊಂದಿಗೆ, ಸ್ವಾತಂತ್ರ್ಯದೊಂದಿಗೆ ಬದುಕಬೇಕು ಎಂದು ಕುರ್ ಆನ್ ಹೇಳಿದೆ.

.ಜಗತ್ತಿನ ಎಲ್ಲ ಅಪರಾಧಗಳ ಮೂಲ ಜನಾಂಗೀಯತೆ ಅಂದರೆ ಜಾತಿ, ಧರ್ಮಗಳ ಶ್ರೇಷ್ಠ-ಕನಿಷ್ಠ ಎನ್ನುವುದು. ಆದರೆ ಬಾಚಣಿಗೆಯ ಹಲ್ಲುಗಳ ಹಾಗೆ ಎಲ್ಲರೂ ಸಮಾನರು. ಧರ್ಮದ ಹೆಸರಲ್ಲಿ ರಕ್ತಪಾತವಾಗಬಾರದು. ಹೀಗಾಗಿ ಕುರ್ ಆನ್ ಕಲಿಸಿದ್ದು ಧಾರ್ಮಿಕ ಸ್ವಾತಂತ್ರ್ಯ, ಪ್ರತಿಯೊಬ್ಬರಿಗೂ ನ್ಯಾಯ ಸಿಗಬೇಕು ಎಂದು ಹೇಳಿದರು.

ಕ್ರೈಸ್ತ ಧರ್ಮದ ಕುರಿತು ಎಂ.ಎಸ್. ರಾಜು ಮಾತನಾಡಿ, ಏಸುವು ಧರ್ಮ ಸ್ಥಾಪಿಸಲು ಬರಲಿಲ್ಲ. ಕೆಡುಕುಗಳನ್ನು ತಡೆಯಲು ಹೋರಾಡಿದರು. ಆದರೆ ಅವರನ್ನು ಶಿಲುಬೆಗೆ ಏರಿಸಿದಾಗ ಮಾನವ ಹಕ್ಕುಗಳ ಉಲ್ಲಂಘನೆಯಾಯಿತು. ಆದರೆ ತನ್ನನ್ನು ಶಿಲುಬೆಗೆ ಏರಿಸಿದವರನ್ನೇ ರಕ್ಷಿಸು ಎಂದು ಏಸು ಹೇಳಿದರು. ಏಸು ಎಂದರೆ ವಿಮೋಚಕ ಎಂದು ಹೇಳಿದರು.

ಅತಿಥಿಗಳಾಗಿ ಹಿರಿಯೂರು ಶಿಕ್ಷಣಾಧಿಕಾರಿ ಸಿ.ಎಂ.ತಿಪ್ಪೇಸ್ವಾಮಿ ಇತರರು ವೇದಿಕೆ ಮೇಲಿದ್ದರು.

ನಂತರ ನಡೆದ ಸಂವಾದದಲ್ಲಿ ಜಿಲ್ಲೆಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಶಿಕ್ಷಕರು ಭಾಗವಹಿಸಿದ್ದರು.



ಸಂಡೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಪ್ರಚಾರ ಮುಗಿಸಿ ಬೆಂಗಳೂರಿಗೆ ಹೋಗುವ ಮಾರ್ಗದಲ್ಲಿ ಸಂಜೆ ವಿಧಾನ ಸಭೆ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್. ಕೋಲಾರದ ಮಾಜಿ ಸಂಸದರಾದ ಮುನಿಸ್ವಾಮಿ ಚಿತ್ರದುರ್ಗದ ಬಿ.ಜೆ.ಪಿ ಯುವ ಮೋರ್ಚಾ ರಾಜ್ಯ ಕಾರ್ಯದರ್ಶಿ ಶ್ರೀಮತಿ ಎನ್.ಬಿ.ಭಾರ್ಗವಿ ದ್ರಾವಿಡ್ ಅವರ ನಿವಾಸಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಅವರನ್ನು ಕುಟುಂಬದವರು ಸನ್ಮಾನಿಸಿ ಗೌರವಿಸಲಾಯಿತು.

# ಕೆಡಿಪಿ ಸಭೆ ನಡೆಸದ ಅಧಿಕಾರಿಗಳು

## ಕೆಡಿಪಿ ನಡೆಸದಂತೆ ಶಾಸಕರ ಅಧಿಕಾರಿಗಳ ಮೇಲೆ ನಿಯಂತ್ರಣ, ಕೆಡಿಪಿ ಸದಸ್ಯ ಸುರೇಶ್ ಪಾಡಿಗಟ್ಟೆ ಆಕ್ರೋಶ

**ಹೊಳಲ್ಕೆರೆ:** ಕ್ಷೇತ್ರದಲ್ಲಿ ಅಭಿವೃದ್ಧಿ ನಿಂತು ಸರ್ಕಾರದ ಅನುದಾನ ದುರ್ಬಳಕೆ ನಿಯಂತ್ರಣ ಕೂಡಲೆ ತಾಲ್ಲೂಕು ಕೆಡಿಪಿ ಸಭೆ ಕರೆಯಬೇಕೆಂದು ಸರ್ಕಾರಿ ನಾಮ ನಿರ್ದೇಶಿತ ಕೆ ಡಿ ಪಿ ಸದಸ್ಯರು ಹಾಗೂ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಸುರೇಶ್ ಪಾಡಿಗಟ್ಟೆ ಜಿಲ್ಲಾ ಅಧಿಕಾರಿಗಳಿಗೆ ಆಗ್ರಹಿಸಿದರು. ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕೆ ಗೋಷ್ಠಿ ನಡೆಸಿ ಮಾತನಾಡಿ, ಕೆಡಿಪಿ ಸಭೆಯ ಬಗ್ಗೆ ಅಸಡ್ಡೆ ತೋರುತ್ತಿರುವ ಅಧಿಕಾರಿಗಳು ಶಾಸಕರು ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಿರುವುದು ತಾಲೂಕಿನಲ್ಲಿ ಮತ ನೀಡಿದ ಮತದಾರರಿಗೆ ಮಾಡುತ್ತಿರುವ ಮಹಾಮೋಸ .ಜತೆ ಕ್ಷೇತ್ರದಲ್ಲಿ ಅಭಿವೃದ್ಧಿ ಇಲ್ಲದೆ ಜನರ ಸೊರಗುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ತಾಲೂಕಿನ ಅಭಿವೃದ್ಧಿಯ ಬಗ್ಗೆ ಅಧಿಕಾರಿಗಳೊಂದಿಗೆ ಶಾಸಕರು ಹಾಗೂ ಕೆಡಿಪಿ ಸದಸ್ಯರುನೊಳಗೊಂಡ ಒಂದು ಸಮಿತಿ ಇದ್ದರೂ ಪ್ರತಿ ತ್ರೈಮಾಸಿಕವಾಗಿ ತಾಲೂಕಿನ ಅಭಿವೃದ್ಧಿಯ ಬಗ್ಗೆ ಚರ್ಚಿಸಿ ಕಾನೂನಾತ್ಮಕವಾಗಿ ಸರಿದೂಗಿಸುವುಕೊಂಡು ಹೋಗಬೇಕು..ಆದರೆ ತಾಲೂಕಿನ ಆಡಳಿತದ ಹಿತ ದೃಷ್ಟಿಯಿಂದ ಕೆಡಿಪಿ ಸಭೆ ಬಹಳ ಮುಖ್ಯವಾದುದು ಸಭೆಯನ್ನು ಕರೆಯಲು ಅಧಿಕಾರಿಗಳ ಗಮನಕ್ಕೆ ತಂದರೆ ನೋಡೋಣ,ಮಾಡೋಣ ಶಾಸಕರು ದಿನಾಂಕ ಕೊಡಲಿ ಅನಂತರ ನೋಡೋಣ ಎಂಬ ಹಾರಿಕೆ

ಪುಟ 2

**ಪ್ರಮುಖ ಸುದ್ದಿ**

# ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಓದುವ ಮಕ್ಕಳ ಪ್ರೋತ್ಸಾಹ ಧನ 1 ರಿಂದ 2 ಲಕ್ಷಕ್ಕೆ ಹೆಚ್ಚಳ : ಸಚಿವ ಡಾ.ಹೆಚ್.ಸಿ.ಮಹದೇವಪ್ಪ

» **ಚಿತ್ರದುರ್ಗ**

ಐಐಟಿ, ಐಐಎಂ, ಐಐಎಸ್‌ಸಿ, ಎನ್‌ಐಟಿಯಂತಹ ರಾಷ್ಟ್ರೀಯ ಸಂಸ್ಥೆಗಳಲ್ಲಿ ಓದುವ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು 1 ರಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಿ ಸರ್ಕಾರವು ಆದೇಶ ಹೊರಡಿಸಿದ್ದು, ಇದು ಪರಿಶಿಷ್ಟ ಸಮುದಾಯದ ವಿದ್ಯಾರ್ಥಿಗಳ ಹೆಚ್ಚಿನ ಶೈಕ್ಷಣಿಕ ಸಾಧನೆಗೆ ಕಾರಣವಾಗಲಿದೆ ಎಂದು ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪನವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇನ್ನು ಪಿಯುಸಿ ಪರೀಕ್ಷೆಯಲ್ಲಿ 95 ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದು, ನೀಟ್ ಪ್ರವೇಶ ಪರೀಕ್ಷೆಯ ಮೂಲಕ ಸರ್ಕಾರಿ ಕೋಟಾದಡಿ ಪ್ರವೇಶ ದೊರಕದೇ ಮ್ಯಾನೇಜ್ ಮೆಂಟ್ ಕೋಟಾದಡಿ ಎಂಬಿಬಿಎಸ್ ಕೋರ್ಸ್ ಗೆ ಸೀಟು ಪಡೆದುಕೊಂಡ ಪರಿಶಿಷ್ಟ ಜಾತಿಯ ಮಕ್ಕಳಿಗೆ 25 ಲಕ್ಷ ರೂಪಾಯಿಗಳ



ಶುಲ್ಕ ಧನವನ್ನು ಒದಗಿಸಲು ಸರ್ಕಾರ ತೀರ್ಮಾನಿಸಿದೆ.

ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಮೊದಲ ವರ್ಷ ಶೇ.60 ಕ್ಕೂ ಹೆಚ್ಚಿನ ಅಂಕ ಪಡೆದು ಉತ್ತೀರ್ಣರಾದರೆ ಅವರಿಗೆ ಅವರಿಗೆ ಮತ್ತೆ 25 ಲಕ್ಷ ರೂಪಾಯಿಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಶಿಕ್ಷಣವೇ ಸಮಾಜವನ್ನು ಬದಲಿಸುವ ಕೀಲಿಕೈ ಎಂಬ ಅಂಶವನ್ನು ಮನಗಂಡು ಈ ಒಂದು ಮಹತ್ವದ ಘೋಷಣೆಯನ್ನು ಸರ್ಕಾರವು ಮಾಡಿದ್ದು, ಇದರಿಂದ ಉನ್ನತ ಶಿಕ್ಷಣ ಮಾಡಬೇಕೆಂಬ ವಿದ್ಯಾರ್ಥಿಗಳ ಕನಸ್ಸು ನನಸಾಗಲಿದೆ.

ಐಐಟಿ ಐಐಎಂ ನಂತಹ ಶಿಕ್ಷಣ ಸಂಸ್ಥೆಗಳಲ್ಲಿ ಓದುವಂತಹ ಪರಿಶಿಷ್ಟ ಜಾತಿ ಮತ್ತು ಪಂಗಡದ ಮಕ್ಕಳು ದೇಶ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಬೇಕು, ಆ ಮೂಲಕ ಸಮೃದ್ಧ ಮತ್ತು ಸಶಕ್ತ ರಾಷ್ಟ್ರದ ನಿರ್ಮಾಣವಾಗಬೇಕು ಎಂದು ಮಾನ್ಯ ಸಚಿವರು ತಿಳಿಸಿದರು.

ಇನ್ನು ಬಡತನದ ಬೇಗೆಗೆ ಸಿಲುಕಿ ಎಂಬಿಬಿಎಸ್ ಓದುವ ಬಯಕೆ ಇರುವಂತಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರಿ ಕೋಟಾದಡಿ ಸೀಟು ಸಿಗದೇ ಅವರು ಖಾಸಗೀ ಸಂಸ್ಥೆಗಳಲ್ಲಿ ಓದುತ್ತಿದ್ದರೆ, ಅಂತಹ ಪ್ರತಿಭಾವಂತ ಮಕ್ಕಳ ಶುಲ್ಕವನ್ನು ಸರ್ಕಾರ ಭರಿಸಲಿದ್ದು, ಇದಕ್ಕಾಗಿ ಆರಂಭಿಕವಾಗಿ 25 ಲಕ್ಷ ರೂಪಾಯಿಗಳನ್ನು ನೀಡುವ ನಿರ್ಧಾರವನ್ನು ತೆಗೆದುಕೊಂಡಿದೆ. ಈಗಾಗಲೇ ಪ್ರಬುದ್ಧ ಯೋಜನೆಯಡಿ ವಿದೇಶಿ ವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಿರುವ ನಮ್ಮ ಸರ್ಕಾರವು ಇದೀಗ ಮಕ್ಕಳ ಉತ್ತಮ ಶಿಕ್ಷಣವನ್ನು ಗಮನದಲ್ಲಿಟ್ಟುಕೊಂಡು ಮುಖ್ಯ ಘೋಷಣೆ ಮಾಡಿರುತ್ತದೆ. ಹೀಗಾಗಿ ಬಾಬಾ ಸಾಹೇಬರ ಆಶಯದಂತೆ ನಮ್ಮೆಲ್ಲಾ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ನಿಟ್ಟಿನಲ್ಲಿ ಹೆಚ್ಚು ಆಸಕ್ತಿ ಹೊಂದಿ, ಶ್ರಮ ಹಾಕಿ ಓದಬೇಕೆಂದು ಸಚಿವರು ಆಶಯ ವ್ಯಕ್ತಪಡಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯ ಸ್ಪರ್ಧೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ನಗರದ ಜಿಲ್ಲಾ ಬಾಲಭವನ ಸೊಸೈಟಿಯಿಂದ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯ ಪ್ರಯುಕ್ತ 6 ರಿಂದ 16 ವರ್ಷದ ಮಕ್ಕಳಿಗೆ ನವಂಬರ್ 12 ರಂದು ಬೆಳಿಗ್ಗೆ 11 ಗಂಟೆಯಿಂದ 3 ಗಂಟೆಯವರೆಗೆ ಜಿಲ್ಲಾ ಬಾಲಭವನ ಸೊಸೈಟಿ ಜೆ.ಹೆಚ್ ಪಟೇಲ್ ಬಡಾವಣೆಯಲ್ಲಿರುವ ಆವರಣದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಸೃಜನಾತ್ಮಕ ಪ್ರದರ್ಶನ ಕಲೆಗಳಾದ ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ, ವಾದ್ಯ ಸಂಗೀತ, ತಬಲಾ, ಮೃದಂಗ, ಕಿಬೋರ್ಡ್, ಕೊಳಲು, ಡೊಳ್ಳು ಮತ್ತು ನಗಾರಿ, ವಿಜ್ಞಾನದಲ್ಲಿ ಸೃಜನಾತ್ಮಕ ಅವಿಷ್ಕಾರ ಹಾಗೂ ಚಿತ್ರಕಲೆ ಸ್ಪರ್ಧೆಗಳನ್ನು ಏರ್ಪಡಿಸಿದ್ದು, ಆಸಕ್ತರು ನವಂಬರ್ 11 ರೊಳಗಾಗಿ ತಮ್ಮ ಹೆಸರುಗಳನ್ನು ಜಿಲ್ಲಾ ಬಾಲಭವನ, ಜೆ.ಹೆಚ್ ಪಟೇಲ್ ಬಡಾವಣೆ, ಇಲ್ಲಿ ನೋಂದಾಯಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ9964496242 ಸಂಖ್ಯೆಗೆ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ವ್ಯವಸ್ಥಾಪಕ ಆತ್ಮಹತ್ಯೆ

» ತುರುವೇಕೆರೆ



ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ (ಕೆಎಫ್ ಸಿಎಸ್ ಸಿ) ಸಗಟು ಅಂಗಡಿ ವ್ಯವಸ್ಥಾಪಕ ಆರ್.ರವಿಕುಮಾರ್ (59) ಮಂಗಳವಾರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರವಿಕುಮಾರ್ ಅವರು ವಿವಿಧ ತಾಲ್ಲೂಕು ಸೊಸೈಟಿಗಳು, ಹಾಸ್ಟೆಲ್ಗಳು ಮತ್ತು ಶಾಲೆಗಳಿಗೆ ಅಕ್ಕಿ ಸೇರಿದಂತೆ ಅಗತ್ಯ ಆಹಾರ ಪದಾರ್ಥಗಳ ಪೂರೈಕೆಯ ಮೇಲ್ವಿಚಾರಣೆ ನಡೆಸುತ್ತಿದ್ದರು. ಮೂಲತಃ ಶಿರಾ ತಾಲ್ಲೂಕಿನ ದೇವನಹಳ್ಳಿಯವರಾದ ರವಿಕುಮಾರ್, ತುರುವೇಕೆರೆಯ ಮಾಯಸಂದ್ರ ರಸ್ತೆಯ ಓಂಕಾರ್ ಆಸ್ಪತ್ರೆ ಹಿಂಭಾಗದ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು. ಮಂಗಳವಾರ ಬೆಳಿಗ್ಗೆ ರವಿಕುಮಾರ್ ಅವರಿಗೆ ಮಾಡಿದ ಕರೆಗಳಿಗೆ ಉತ್ತರಿಸದಿದ್ದಾಗ, ರವಿಕುಮಾರ್ ಅವರ ಪತ್ನಿ ಅವರನ್ನು ಪರಿಶೀಲಿಸಲು ಹೋದರು. ಏನೋ ತಪ್ಪಾಗಿದೆ ಎಂದು ಶಂಕಿಸಿ, ಅವಳು ಮನೆಗೆ ಪ್ರವೇಶಿಸಿದಳು, ಅಲ್ಲಿ ಅವನು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಅವಳು ಕಂಡುಕೊಂಡಳು. ಅವರ ಸಾವಿಗೆ ನಿಖರವಾದ ಕಾರಣವನ್ನು ಇನ್ನೂ ನಿರ್ಧರಿಸಲಾಗಿಲ್ಲ. ಸ್ಥಳೀಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

### ಕಾನೂನು ನೆರವು-ಅರಿವು

» ದಾವಣಗೆರೆ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರ್.ಎಲ್.ಕಾನೂನು ಮಹಾವಿದ್ಯಾಲಯ ಮತ್ತು ವಕೀಲರ ಸಂಘ, ದಾವಣಗೆರೆ ಇವರ ಸಂಯುಕ್ತ ಆಶ್ರಯದಲ್ಲಿ ನವೆಂಬರ್ 9ರಂದು ಬೆಳಿಗ್ಗೆ 10.30ಕ್ಕೆ ಆರ್.ಎಲ್.ಕಾನೂನು ಮಹಾವಿದ್ಯಾಲಯದ ಸಭಾಭವನದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆಯ ಅಂಗವಾಗಿ ಕಾನೂನು ನೆರವು–ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಕಾರ್ಯಕ್ರಮ ಉದ್ಘಾಟಿಸಲಿದ್ದು, ಆರ್.ಎಲ್.ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಜಿ.ಎಸ್.ಯತೀಶ್ ಅಧ್ಯಕ್ಷತೆ ವಹಿಸುವರು.

### ಕೆಡಿಪಿ ಸಭೆ ನಡೆಸದ ಅಧಿಕಾರಿಗಳು

» ಮೊದಲ ಪುಟದಿಂದ

ಸಬೂಬು ಉತ್ತರ ಕೊಡುತ್ತಾರೆ. ಇದು ಸರೀಯಾ ಎಂದು ಪ್ರಶ್ನಿಸಿದರು. ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾ ಅಧಿಕಾರಿಗಳು ಬರೀ ಶಾಸಕರು ದಿನಾಂಕ ಕೇಳುವುದರಲ್ಲಿ ಕಾಲ ಕಳೆಯುತ್ತಿದ್ದಾರೆ .ಕೆಡಿಪಿ ಸದಸ್ಯರ ಅವಶ್ಯಕತೆ ಏನು? ಹಾಗಾದರೆ ಸರ್ಕಾರದಿಂದ ಅವರನ್ನು ಏಕೆ ನಾಮ ನಿರ್ದೇಶನ ಮಾಡಬೇಕಾಗಿತ್ತು . ಶಿಕ್ಷಣ ಆರೋಗ್ಯ ಮೂಲಭೂತ ಸೌಕರ್ಯಗಳ ಬಗ್ಗೆ ಚರ್ಚಿಸಿ ತಾಲೂಕಿನ ಅಭಿವೃದ್ಧಿಯ ಬಗ್ಗೆ ಕ್ರಮ ಕೈಗೊಳ್ಳದೆ ಹೋದರೆ ಶಾಸಕರು ಬರಿ ಗುದ್ದಲಿ ಪೂಜೆ ಮಾಡುತ್ತಾ ಕುಳಿತುಕೊಂಡರೆ ಅಭಿವೃದ್ಧಿ ಯಾವಾಗ ? ಸಣ್ಣ ನೀರಾವರಿ ಇಲಾಖೆ,ಲೋಕೋಪಯೋಗಿ ಇಲಾಖೆ ಮತ್ತು ಇನ್ನಿತರ ಎಲ್ಲ ಇಲಾಖೆಗಳಲ್ಲಿ ಖಅಕ /ಖಖಿಕ ಕಾಮಗಾರಿಗಳು ಯಾವ ರೀತಿ ಹಂಚಿಕೆಯಾಗಿದೆ, ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ತಾಲೂಕಿನಲ್ಲಿ ಸಮರ್ಪಕವಾಗಿ ನಡೆಯುತ್ತಿದೆಯೇ? ಇದನ್ನು ಚರ್ಚಿಸಲು ಯಾರು ಯಾರನ್ನು ಕೇಳಬೇಕು ಓಖಉಇ ಯಲ್ಲಿ ಕಮಿಷನ್ ದಂದೆ ನಡೆಯುತ್ತಿದೆ ಎಂದು ನಮಗೆ ಸುದ್ದಿ ಬರುತ್ತದೆ. ಇದನ್ನು ಕೇಳುವವರು ಯಾರು .ವಿರೋಧ ಪಕ್ಷಗಳು ಕೆಲಸ ಮಾಡುತ್ತಿರುವುದು ಪ್ರಜಾಪ್ರಭುತ್ವದ ವ್ಯಾಪ್ತಿಯಲ್ಲಿ ಯಾರನ್ನೂ ಹೇಳಬೇಕು ಎಂದು ಪ್ರಶ್ನಿಸಿದರು..

---

#### ಅನ್ನೇಹಾಳ್: ಗ್ರಾಮ ಆರೋಗ್ಯ ಯೋಜನೆ ತರಬೇತಿ ಕಾರ್ಯಾಗಾರದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್

# ಬಾಲ್ಯವಿವಾಹ ತಡೆದು, ಸಾಮಾಜಿಕ ಪಿಡುಗು ತೊಲಗಿಸಿ; ನಿಗಾವಣ ತಂಡ ಸಕ್ರಿಯವಾಗಿರಲಿ

» ಚಿತ್ರದುರ್ಗ

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಾಲ್ಯ ವಿವಾಹ ನಿಯಂತ್ರಿಸುವಲ್ಲಿ ಗ್ರಾಮ ನಿಗಾವಣ ತಂಡ ಕಾವಲು ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಅನ್ನೇಹಾಳ್ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿಬುಧವಾರಗ್ರಾಮಆರೋಗ್ಯ ಯೋಜನೆ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಬಾಲ್ಯವಿವಾಹದಿಂದವಯಸ್ಸಿಗೆಮೀರಿದ ಜವಾಬ್ದಾರಿ ಏರಿಸಿದಂತಾಗುತ್ತದೆ. ಅಪ್ರಾಪ್ತ ವಯಸ್ಸಿನಲ್ಲಿ ಗರ್ಭಿಣಿಯಾಗುವುದರಿಂದ ಗರ್ಭಕೋಶದಬೆಳವಣಿಗೆಪೂರ್ಣಗೊಳ್ಳದೆ ಹೆರಿಗೆ ಸಮಯದಲ್ಲಿ ಅಕಾಲಿಕ ಮರಣಕ್ಕೆ ತುತ್ತಾಗುವ ಸಾಧ್ಯತೆ ಹಾಗೂ ವಿಕಲಾಂಗ ಮಕ್ಕಳ ಜನನ ಉಂಟಾಗುತ್ತದೆ. ಮಕ್ಕಳು ಲೈಂಗಿಕ ದೌರ್ಜನ್ಯ ಹಾಗೂ ಬಲತ್ಕಾರಕ್ಕೆ ಒಳಗಾಗುತ್ತಾರೆ.ಲೈಂಗಿಕ ಖಾಯಿಲೆಗಳಿಂದ ಹೆಚ್.ಐ.ವಿ,ಏಡ್ಸ್‌ಗೆಗುರಿಯಾಗುವಸಾಧ್ಯತೆ ಇರುತ್ತದೆ. ರಕ್ತ ಹೀನತೆ ಹಾಗೂ ಕಡಿಮೆ ತೂಕದ ಮಗುವಿನ ಜನನದ ಸಾಧ್ಯತೆ, ಶಿಶು ಮರಣ ಹಾಗೂ ಮಕ್ಕಳ ಮರಣ, ದೈಹಿಕ ಬೆಳವಣಿಗೆ ಕುಂಠಿತ, ಗರ್ಭಪಾತ ಹೆಚ್ಚಾಗುತ್ತದೆ ಈ ಎಲ್ಲಾ ದುಷ್ಪರಿಣಾಮಗಳು ಭೌತಿಕ ದೈಹಿಕ ಆರೋಗ್ಯದ ಮೇಲೆ




ಪರಿಣಾಮ ಉಂಟುಮಾಡುತ್ತವೆ ಹಾಗಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾವಲು ಪಡೆ ಸಕ್ರಿಯವಾಗಿ ಬಾಲ್ಯ ವಿವಾಹ ತಡೆದು ಸಾಮಾಜಿಕ ಪಿಡುಗು ತೊಲಗಿಸಿ ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಗ್ರಾಮ ಪಂಚಾಯಿತಿಯ ಅಭಿವೃದ್ಧಿಯ ಮಾನದಂಡಗಳಾದ ಸಮರ್ಪಕ ಆರೋಗ್ಯ ಸೇವೆಗಳು ತಾಯಿ ಮರಣ, ಶಿಶು ಮರಣ ನಿಯಂತ್ರಣ, ಕ್ಷಯ ರೋಗ ನಿಯಂತ್ರಣ, ಕೀಟಜನ್ಯ ರೋಗಗಳ ನಿಯಂತ್ರಣ, ಮಾನಸಿಕಆರೋಗ್ಯಕರಸೇವಾಸೌಲಭ್ಯಗಳು ಮತ್ತು ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ ನಿಯಂತ್ರಣ ಭ್ರೂಣ ಹತ್ಯೆ ಕಾಯ್ದೆ ಅನುಷ್ಠಾನ, ತಂಬಾಕು ನಿಯಂತ್ರಣ ಕಾಯ್ದೆ ಕಾಯ್ದೆಯ ಅನುಷ್ಠಾನ, ರಕ್ತ ಹೀನತೆ, ಅಪೌಷ್ಟಿಕತೆಯ ನಿವಾರಣೆ, ಜನಸಂಖ್ಯಾ ನಿಯಂತ್ರಣ, ಸಾಂಕ್ರಾಮಿಕವಲ್ಲದ ರೋಗಗಳಾದ ರಕ್ತದೊತ್ತಡ, ಮಧುಮೇಹ, ಕ್ಯಾನ್ಸರ್, ಇತರೆ ಜೀವನ ಶೈಲಿ ರೋಗಗಳ ನಿಯಂತ್ರಣ ಪ್ರಮುಖವಾಗಿರುತ್ತದೆ. ಇವುಗಳನ್ನು ಸ್ಪಷ್ಟವಾಗಿ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಪ್ರಮುಖ ಗುರಿಗಳನ್ನಾಗಿ ಪರಿಗಣಿಸಲಾಗಿದೆ. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದರು. ಪ್ರತಿ ಗ್ರಾಮ ವಾರ್ಡ್‌ಗಳಲ್ಲಿ ಸಮಿತಿಗಳನ್ನು ರಚನೆ ಮಾಡಿ ಪ್ರತಿ ವಾರ್ಡ್‌ಗಳಲ್ಲಿಯೂ ಗ್ರಾಮ ಪಂಚಾಯಿತಿಗೆ ನೀಡಿರುವ ಆರೋಗ್ಯ ಕಿಟ್ ಬಳಕೆ ಮಾಡಿ 30 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಈ ಎಲ್ಲಾ ಮಾಹಿತಿಗಳ ದತ್ತಾಂಶಗಳನ್ನ ಗಣಕೀಕರಣಗೊಳಿಸಿ ಪಂಚಾಯತಿ ಮಟ್ಟದಲ್ಲಿ ಕ್ರಿಯಾಯೋಜನೆ ರೂಪಿಸಿ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ಅವರು ಸಾಂಕ್ರಾಮಿಕ ರೋಗಗಳು ಸಾಂಕ್ರಾಮಿಕವಲ್ಲದ ರೋಗಗಳ ಬಗ್ಗೆ ಮಾಹಿತಿ ಒದಗಿಸಿದರು.

ತಾಲ್ಲೂಕು ಆಶಾ ಬೋಧಕಿ ತಬಿತಾ ಅವರು ಅನಿಮಿಯಾ ಮುಕ್ತ ಭಾರತ ನಿರ್ಮಾಣಕ್ಕಾಗಿ ಅಪೌಷ್ಟಿಕತೆ ತೊಲಗಿಸಲು ಸ್ಥಳೀಯವಾಗಿ ದೊರೆಯುವ ಕಬ್ಬಿನಾಂಶಭರಿತ ಪೌಷ್ಠಿಕ ಆಹಾರಗಳ ಬಗ್ಗೆ ಮಾಹಿತಿ ನೀಡಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮೇಲ್ವಿಚಾರಕಿ ರೂಪಾ, ಮಹಿಳಾ ಸಾರ್ವಭೌಮತ್ವ, ಕಿಶೋರಿಯರ ಆರೋಗ್ಯ, ಹೆಣ್ಣು ಮಕ್ಕಳ ಮುಟ್ಟಿನ ಸಂದರ್ಭದಲ್ಲಿ ಆಗುವಂತಹ ತೊಂದರೆ ಮತ್ತು ಶುಚಿತ್ವದ ಬಗ್ಗೆ ಮಾಹಿತಿ ಒದಗಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಸದಸ್ಯರಾದ ಜಂಪಣ್ಣ, ರಾಜಪ್ಪ, ಪಿಡಿಓ ಅಂಜನಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಕುಮಾರ್. ಸಮುದಾಯ ಆರೋಗ್ಯ ಅಧಿಕಾರಿ ಸುಧಾಕರ್ ಕೋಟೆ, ಶಾಲಾ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ಇದ್ದರು.

---

#### ಸಾಹಿತಿ ಮಾಚೇನಹಳ್ಳಿ ರಾಮಕೃಷ್ಣ ರವರಿಂದ ವಿನೂತನ ಕಾರ್ಯಕ್ರಮ

# ನ.9ಕ್ಕೆ 15 ಪುಸ್ತಕಗಳ ಬಿಡುಗಡೆ ಸಮಾರಂಭ

» ಹೊಸದುರ್ಗ

ಬರುವ ನವೆಂಬರ್ 9ರಂದು ಬೆಳಿಗ್ಗೆ 11:30ಕ್ಕೆ ಅಪ್ಪ ಅವ್ವ ಅಕ್ಷರ ಪಬ್ಲಿಕೇಶನ್ ವತಿಯಿಂದ ಕನ್ನಡ ರಾಜ್ಯೋತ್ಸವದ ಸವಿ ನೆನಪಿಗಾಗಿ 15 ಪುಸ್ತಕಗಳನ್ನ ಲೋಕಾರ್ಪಣೆ ವಿದ್ಯಾರ್ಥಿಗಳ ಬುದ್ಧಿಮಟ್ಟ ಹೆಚ್ಚಿಸಲು ಬಿ ವೈ ವಾಣಿಶ್ರೀ ರಾಮ್ಕಿ ರವರ ವಿದ್ಯಾರ್ಥಿ ವಿಜಯ ಮಸಪತ್ರಿಕೆ ಹಾಗೂ ಮಾಚೇನಹಳ್ಳಿ ರಾಮ್ಕಿ ಸಾರಥ್ಯದಲ್ಲಿ ಬರಿ ಶಿಕ್ಷಣಕ್ಕೆ ಸಂಬಂಧಿಸಿದ ವಿದ್ಯಾರ್ಥಿ ವಿಜಯ 24*7 ಯುಟ್ಯೂಬ್ ಚಾನೆಲ್ ಲೋಕಾರ್ಪಣ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು,ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಪ್ಪ ಅವ್ವ ಪಬ್ಲಿಕೇಶನ್ಸ್ ಮುಖ್ಯಸ್ಥ ಮಾಚೇನಹಳ್ಳಿ ರಾಮಕೃಷ್ಣ ತಿಳಿಸಿದರು.

ನಗರದಲ್ಲಿ ನಡೆದ ಪೂರ್ವಬಾವಿ ಸಬೆಯಲ್ಲಿ ಮಾತನಾಡಿದ ಅವರು ಕಾರ್ಯಕ್ರಮವನ್ನು ಕ್ಷೇತ್ರದ ಶಾಸಕರಾದ ಬಿಜಿ ಗೋವಿಂದಪ್ಪನವರು ಉದ್ಘಾಟಿಸಲಿದ್ದು ಕನಕ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಎಂ ಎಚ್ ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸುವರು. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್ ಮಂಜುನಾಥ್ .ಡಿ ದೇವರಾಜ ಅರಸು ಶಿಕ್ಷಣ ಸಮೂಹ ಸಂಸ್ಥೆಗಳ ಅಧ್ಯಕ್ಷ ಎಂ ಸಿ ರಘುಚಂದನ್ ಮಾಜಿ ಸಚಿವೆ ಬಿ ಟಿ ಲಲಿತಾ ನಾಯಕ್ ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ವಸುಂದರಾ ಭೂಪತಿ, ವಿಜಯ ಕರ್ನಾಟಕ ಹಿರಿಯ ಸಂಪಾದಕ ಸೋಮಶೇಖರ್ ಕಿಲಾರಿ ಕಾರ್ಯಕ್ರಮದಲ್ಲಿ ಭಾಗವಹಿಸುವರು.



ಪ್ರೌಢಶಾಲಾ ಹಂತದಲ್ಲಿ ನಡೆಯುವ ಎನ್ ಎಂ ಎಂ ಎಸ್ ಪರೀಕ್ಷೆಯಲ್ಲಿ ಉನ್ನತ ಮಟ್ಟದಲ್ಲಿ ತೇರ್ಗಡೆಯಾಗಿರುವ ತಾಲೂಕಿನ 47 ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಮಾಜಿ ಸಚಿವೆ, ಸಾಹಿತಿ ಬಿಟಿ ಲಲಿತ ನಾಯಕ್ ರವರ ಬದುಕು ಮುತ್ತು ಬರಹಕ್ಕೆ ಸಂಬಂಧಿಸಿದ ವ್ಯಕ್ತಿ ಚಿತ್ರ ಬಿಡುಗಡೆ ಮಾಡಲಾಗುವುದು. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳೇ ಪರೀಕ್ಷೆಯನ್ನು ನಗುತ್ತಾ ಎದುರಿಸಿ, ಲೂಸಿ ಮರ ಏರುತ್ತಿದ್ದಳೇ ? ಶ್ರೀಗಂಧವನ, ಆಗಸ್ಟ್ ನೆನಪುಗಳು ಜೇನು ಕೃಷಿ ನೀಲಗ್ರಹ ಅವಸರದಲ್ಲಿದೆಯೇ, ಮಕ್ಕಳಿಗಾಗಿ ಬೇಸಿಕ್ ಕಂಪ್ಯೂಟರ್, ಯಕ್ಷಪ್ರಶ್ನೆ ಮೊಗ್ಗು ಅರಳುವ ಸಮಯ ಈ 15 ಕೃತಿಗಳು ಲೋಕಾರ್ಪಣೆಗೊಳ್ಳುವವು ಎಂದು ಅಪ್ಪ ಅವ್ವ ಅಕ್ಷರ ಪಬ್ಲಿಕೇಶನ್ಸ್ ಮುಖ್ಯಸ್ಥ ಮಾಚೇನಹಳ್ಳಿ ರಾಮಕೃಷ್ಣ ತಿಳಿಸಿದರು. ಸಭೆಯಲ್ಲಿ ಬಿ ವೈ ವಾಣಿಶ್ರೀ ರಾಮ್ಕಿ ಇದ್ದರು.

---

### ಡಾ, ರಾಜಕುಮಾರ್ ಸಂಘ ನೂತನ ಅಧ್ಯಕ್ಷರಾಗಿ ಗೌಡ್ರ ತಿಪ್ಪೇಸ್ವಾಮಿ ಆಯ್ಕೆ.



» ಹೊಸದುರ್ಗ

ಡಾಕ್ಟರ್ ರಾಜಕುಮಾರ್ ಸಂಘದ ನೂತನ ಕಾರ್ಯಕಾರಿ ಮಂಡಳಿ ಸಭೆಯಲ್ಲಿ ಸರ್ವಾನು ಮತದಿಂದ ಅಧ್ಯಕ್ಷರಾಗಿ ನಾಮ ನಿರ್ದೇಶಾಪುರ ಸಭಾ ಸದಸ್ಯ ಗೌಡ್ರ ತಿಪ್ಪೇಸ್ವಾಮಿ ಆಯ್ಕೆಯಾದರು.



ಉಪಾಧ್ಯಕ್ಷರಾಗಿ ತಂಗಾಳಿ ತಮ್ಮಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ಶಹಜಾನ್ , ಸಹ ಕಾರ್ಯದರ್ಶಿಯಾಗಿ ಜಾದು ಮೋಹನ್ ಖಜಾಂಚಿ ಆಗಿ ಏ ಎಸ್ ಕೊಟ್ರೇಶ್, ಗೌರವಾಧ್ಯಕ್ಷರಾಗಿ ಆಗ್ರೋ ಶಿವಣ್ಣನವರು ಶೀತಲ್ ಕುಮಾರ್ ರವರು ಎಂಎಸ್ ನಾಗರಾಜ್ ಅವರನ್ನು ಸರ್ವಾನು ಮತದಿಂದ ಆಯ್ಕೆ ಮಾಡಲಾಯಿತು. ರಾಜಕುಮಾರ್ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಗೌಡ್ರ ತಿಪ್ಪೇಸ್ವಾಮಿ ಮಾತನಾಡಿ ಕನ್ನಡ ನಾಡು ನುಡಿ ನೆಲಜಲಕ್ಕೆ ಸಂಬಂಧಿಸಿದಂತೆ ಡಾಕ್ಟರ್ ರಾಜಕುಮಾರ್ ಅವರು ತನ್ನ ಜೀವನವನ್ನು ಮೀಸಲಿರಿಸಿದ್ದರು ಅವರು ಎಂದಿಗೂ ಕನ್ನಡ ಚಿತ್ರರಂಗವನ್ನು ಬಿಟ್ಟು ಬೇರೆ ಚಿತ್ರರಂಗದಲ್ಲಿ ಅಭಿನಯ ಮಾಡಲಿಲ್ಲ. ನಮ್ಮ ಕನ್ನಡ ನಾಡು ನುಡಿಗೆ ದಕ್ಕೆ ಬಂದರೆ ಎಂತಹ ಹೋರಾಟ ಮಾಡಲು ನಮ್ಮ ಸಂಘಟನೆ ಸಿದ್ಧವಾಗಿರುತ್ತದೆ ಎಂದು ತಿಳಿಸಿದರು.

---

**ಪ್ರಮುಖ ಸುದ್ದಿ**

# ಒಳ್ಳೆಯ ಮಾತುಗಳನ್ನು ಕೇಳುವುದಷ್ಟೇ ಮುಖ್ಯವಲ್ಲ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು "ಸಾಣೇಹಳ್ಳಿ ಶ್ರೀ"

» ಹೊಸದುರ್ಗ

ಬದುಕಿನಲ್ಲಿ ಶ್ರವಣ, ಮನನ, ನಿದಿಧ್ಯಾಸನ ಅಳವಡಿಸಿಕೊಳ್ಳಬೇಕು. ಮಾತು ಮುತ್ತು ಉದುರಿಸಿದ ಹಾಗಿರಬೇಕು. ನುಡಿದಂತೆ ನಡೆದರೆ ನಮ್ಮ ಬದುಕು ಗಟ್ಟಿಯಾಗುತ್ತದೆ. ಆದರೆ ಅನೇಕರ ಮಾತಿಗೂ ಕೃತಿಗೂ ಸಂಬಂಧವಿರುವುದಿಲ್ಲ. ರಾಜಕಾರಣಿಗಳು, ಸಾಹಿತಿಗಳು, ಕೆಲಸ್ವಾಮಿಗಳೂ ನಡೆದಂತೆ ನುಡಿಯಲ್ಲ; ನುಡಿದಂತೆ ನಡೆಯಲ್ಲ. ಆದರೆ ಬುದ್ಧ, ಬಸವ, ಗಾಂಧಿ ಅವರು ತಮ್ಮ ದೋಷಗಳನ್ನು ಸರಿಪಡಿಸಿಕೊಂಡಿದ್ದರಿಂದ ಮಹಾತ್ಮರಾದರು. ಅವರ ಹಾಗೆ ನಡೆ–ನುಡಿಯ ಅಂತರವನ್ನು ಕಿತ್ತು ಹಾಕಿದಾಗ ಶ್ರೇಷ್ಠ ವ್ಯಕ್ತಿತ್ವ ಗಳಿಸಲು ಸಾಧ್ಯವಾಗುತ್ತದೆ ಎಂದು ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಜಿ ತಿಳಿಸಿದರು.

ರಾಷ್ಟ್ರೀಯ ನಾಟಕೋತ್ಸವ ಅಂಗವಾಗಿ ಗುರುವಾರ ಶಿವಕುಮಾರ ರಂಗಮಂದಿರದಲ್ಲಿ ಆಯೋಜಿಸಿದ್ದ ಚಿಂತನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ



ಅವರು ಆಶೀರ್ವಚನ ನೀಡಿದ ಅವರು ಒಬ್ಬರು ಹೇಳಿದ ಒಳ್ಳೆಯ ವಿಚಾರವನ್ನು ಶ್ರದ್ಧೆಯಿಂದ ಕೇಳಬೇಕು, ಕೇಳಿದ್ದನ್ನು ಮನನ ಮಾಡಿಕೊಳ್ಳಬೇಕು ನಂತರ ಅದನ್ನು ಧ್ಯಾನಿಸಿಕೊಳ್ಳಬೇಕು. ಬಳಿಕ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಇದಕ್ಕಾಗಿ ಮಾತು ಮತ್ತು ಕೃತಿ ಮುಖ್ಯ. ಮಾತಿನಂತೆ ನಡೆದುಕೊಳ್ಳುವುದು ಬಹಳ ಮುಖ್ಯ. ಒಳ್ಳೆಯ ಮಾತುಗಳನ್ನು ಕೇಳುವುದಷ್ಟೇ ಮುಖ್ಯವಲ್ಲ; ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು .

ದೇವರಿಗೆ ಬಸವಣ್ಣನವರು ಸವಾಲು ಹಾಕುತ್ತಾರೆ. ಭಗವಂತ, ಮಾತಾಡಿದ ಹಾಗೆ ನಡೆದುಕೊಳ್ಳುತ್ತೇನೆ. ನಡೆ–ನುಡಿಯ ನಡುವೆ ಅಂತರ ಬಂದರೆ ತುಳಿದುಹೋಗು ಎನ್ನುತ್ತಾರೆ. ಹೀಗಾಗಿ ನಮ್ಮ ಮನಸ್ಸು ಓತಿಕ್ಯಾತ, ಮಂಗ ಹಾಗೂ ಗಾಳಿಯಿದ್ದ ಹಾಗೆ. ಆದರೆ ಮನಸ್ಸು ಬಂದ ಹಾಗೆ ಹರಿಯಬಿಟ್ಟರೆ ಉದ್ಧಾರವಾಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ದಾವಣಗೆರೆಯ ಶಿವನಕೆರೆ ಬಸವಲಿಂಗಪ್ಪ ನಡೆ–ನುಡಿ ಸಿದ್ಧಾಂತ ಕುರಿತಂತೆ ಮಾತನಾಡಿ, ನಿರಹಂಕಾರ, ನಿರ್ಭಯ, ನಿಸ್ವಾರ್ಥದೊಂದಿಗೆ ಆದಾಯ, ಆನಂದ, ಆರೋಗ್ಯ ಚೆನ್ನಾಗಿರಬೇಕು ಎಂದರು.ನಡೆ–ನುಡಿ ಒಂದಾಗಿರಬೇಕು. ಮಾತಾಡಿದಂತೆ ನಡೆಯಬೇಕು. ನಡೆದಂತೆ ನುಡಿಯಬೇಕು. ಹೀಗೆ ಶಿವಕುಮಾರ ಶಿವಾಚಾರ್ಯ ಸ್ವಾಮಿಗಳು ಬದುಕಿದ್ದರು. ಹೀಗೆಯೇ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ನಡೆದಂತೆ ನುಡಿಯುತ್ತಾರೆ. ನುಡಿದಂತೆ ನಡೆಯುತ್ತಾರೆ .

ಹಗುರಾಗಿ ಮೈ, ಹಂಗಿಲ್ಲದ ಬದುಕು ಹಾಗೂ ಹಗೆಯಿಲ್ಲದ ನುಡಿಯ ಹಾಗೆ ಬದುಕಬೇಕು. ಇದರೊಂದಿಗೆ ಕಾಯಕವು ನಮ್ಮ ಜೀವನವನ್ನು ರೂಪಿಸುತ್ತದೆ. ಹಾಗೆಯೇಕಾಲ ಮತ್ತು ಕಾಸನ್ನು ಸರಿಯಾಗಿ ಬಳಸಿದವರು ಉದ್ಧಾರವಾಗುತ್ತಾರೆ ಎಂದು ಶಿವಕುಮಾರ ಶಿವಾಚಾರ್ಯ ಸ್ವಾಮಿಗಳು ಹೇಳುತ್ತಿದ್ದರು. ಇದರೊಂದಿಗೆ ಇನ್ನೊಬ್ಬರ ಕಷ್ಟಕ್ಕೆ ನೆರವಾಗಬೇಕು. ಏಕೆಂದರೆ ಹುಟ್ಟುಬುದ್ಧಿ ಹೂಳೋತನಕ ಎಂಬ ಗಾದೆಯಿಂದೆ. ಬಾಲ್ಯದಿಂದ ಇಪ್ಪತ್ತು ವರ್ಷಗಳವರೆಗೆ ಒಳ್ಳೆಯ ಬುದ್ಧಿಯಿದ್ದರೆ ಅದು ಮುಂದೆ ಜೀವನಪೂರ್ತಿ ಬರಲಿದೆ. ಎಂದು ತಿಳಿಸಿದರು.

## ಫಾಸ್ಟ್ ನ್ಯೂಸ್

### ಶ್ರೀ ಶಿವಲಿಂಗಾನಂದ ಶ್ರೀ ಜನ್ಮ ದಿನ ನ.೯ ರಂದು


» ಚಿತ್ರದುರ್ಗ



ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿರುವ ಶ್ರೀ ಕಬೀರಾನಂದ ಆಶ್ರಮದ ಪೀಠಾಧಿಪತಿಗಳಾದ ಶ್ರೀ ಶಿವಲಿಂಗಾನಂದ ಶ್ರೀಗಳು ಜನ್ಮ ದಿನವನ್ನು ನ.9 ರಂದು ಆಚರಣೆ ಮಾಡಲು ಭಕ್ತ ಸಮೂಹ ನಿರ್ಧಾರ ಮಾಡಿದೆ. ನ. 9 ರ ಶನಿವಾರ ಸಂಜೆ 7 ಗಂಟೆಗೆ ಇದರ ಅಂಗವಾಗಿ ಕಾರ್ಯಕ್ರಮವನ್ನು ನಗರದ ಕಬೀರಾನಂದ ಆಶ್ರಮದ ಆವರಣದಲ್ಲಿ ಹಮ್ಮಿಕೊಂಡಿದ್ದು ಭಕ್ತಾಧಿಗಳು ಸಕಾಲಕ್ಕೆ ಆಗಮಿಸುವುದರ ಮೂಲಕ ಶ್ರೀಗಳ ದರ್ಶನಾ ಶೀರ್ವಾದವನ್ನು ಪಡೆಯುವಂತೆ ಶ್ರೀ ಕಬೀರಾನಂದಾ ಶ್ರಮದ ಭಕ್ತ ಸಮೂಹ ಮನವಿ ಮಾಡಿದೆ.

### ಅಹಮ್ಮದ್‌ಖಾನ್ ನಿಧನ: ಇಂದು ಅಂತ್ಯಕ್ರಿಯೆ

» ಚಳ್ಳಕೆರೆ



ಗಾಂಧಿನಗರ ನಿವಾಸಿ, ಸ್ವಾಮಿವಿವೇಕಾನಂದ ವಿದ್ಯಾಸಂಸ್ಥೆಯ ನಿವೃತ್ತ ನೌಕರ ಅಹಮ್ಮದ್ ಖಾನ್ (66) ಅನಾರೋಗ್ಯ ಹಿನ್ನೆಲೆಯಲ್ಲಿ ತಮ್ಮ ನಿವಾಸದಲ್ಲೇ ಗುರುವಾರ ಸಂಜೆ ನಿಧನರಾದರು. ನಗರದ ಸ್ವಾಮಿವಿವೇಕಾನಂದ ವಿದ್ಯಾಸಂಸ್ಥೆಯಲ್ಲಿ ಸುಮಾರು 45 ವರ್ಷಗಳ ಕಾಲ ಸೇವೆ ಸಲ್ಲಿಸಿದ ಕೀರ್ತಿ ಇವರದ್ದು. ಪತ್ನಿ, ಇಬ್ಬರು ಪುತ್ರಿಯರು ಹಾಗೂ ಅಪಾರಬಂಧುಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಬೆಳಗ್ಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಸಂತಾಪ** : ಸ್ವಾಮಿವಿವೇಕಾನಂದ ವಿದ್ಯಾಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಆಡಳಿತಾಧಿಕಾರಿ ಡಿ.ಆರ್.ಪ್ರಮೀಳಾ, ನಾಮಿನಿ ಸದಸ್ಯ ಅನ್ವರ್‌ಮಾಸ್ಟರ್, ಸೈಯದ್, ಬಿ.ಫರೀದ್‌ಖಾನ್(ಭಾಷ), ಜುಬೇರ್, ಮಹಮ್ಮದ್‌ಸೈಪುಲ್ಲಾ ಮುಂತಾದವರು ಮೃತರ ನಿಧನಕ್ಕೆ ಸಂತಾಪ ವ್ಯಕ್ತಪಡಿಸಿದ್ದಾರೆ.

### ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ಶಿಕ್ಷಣ ಇಲಾಖೆ ನಿರಂತರ ಜಾಗೃತಿ: ಬಿಇಒ ಕೆ.ಎಸ್.ಸುರೇಶ್



» ಚಳ್ಳಕೆರೆ

ತಾಲ್ಲೂಕು ಮಟ್ಟದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯವಿಲಕಚೇತನವಿದ್ಯಾರ್ಥಿಗಳಿಗೆವೈದ್ಯಕೀಯ ಮೌಲ್ಯಂಕನ ಶಿಬಿರವನ್ನು ನಗರ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕಶಾಲೆಯಲ್ಲಿ ಹಮ್ಮಿಕೊಂಡಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಶಿಬಿರಕ್ಕೆ ಚಾಲನೆ ನೀಡಿದರು. ರಾಜ್ಯ ಸರ್ಕಾರ ಪ್ರತಿವರ್ಷ ವಿಲಕಚೇತನ ವಿದ್ಯಾರ್ಥಿಗಳ ವೈದ್ಯಕೀಯ ಮೌಲ್ಯಂಕನ ಶಿಬಿರ ಹಮ್ಮಿಕೊಳ್ಳುವ ಮೂಲಕ ಅವರ ಆರೋಗ್ಯ ತಪಾಸಣೆ, ಬೆಳವಣಿಗೆ ಬಗ್ಗೆ ಸೂಕ್ತ ಮಾರ್ಗದರ್ಶನವನ್ನು ಸಹ ನೀಡಲಾಗುತ್ತಿದೆ. ಪೋಷಕರು ಆರೋಗ್ಯ ತಪಾಸಣೆಯ ನಂತರ ನೀಡುವ ಸಲಹೆ ಸೂಚನೆಗಳನ್ನು ತಪ್ಪದೆ ಪಾಲಿಸಬೇಕಾಗುತ್ತದೆ. ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಗುಣಾತ್ಮಕ ಆರೋಗ್ಯದ ಬಗ್ಗೆಯೂ ಸಹ ಜಾಗೃತೆವಹಿಸುತ್ತದೆ ಎಂದರು. ಶಿಕ್ಷಣ ಇಲಾಖೆ ಅಧಿಕಾರಿ ಸಿ.ಎಸ್.ವೆಂಕಟೇಶಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರಸ್ತುತ ಈ ಶಿಬಿರದಲ್ಲಿ ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಹಿರಿಯೂರು ತಾಲ್ಲೂಕಿನ ವಿಕಲಚೇತನ ವಿದ್ಯಾರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ಆಗಮಿಸಿದ್ದಾರೆ. ನಿರೀಕ್ಷೆಗೂ ಮೀರಿ ಹೆಚ್ಚಿನ ಸಂಖ್ಯೆಯ ವಿಕಲಚೇತನ ವಿದ್ಯಾರ್ಥಿಗಳು ಶಿಬಿರದಲ್ಲಿ ಪಾಲ್ಗೊಂಡಿದ್ದು ಎಲ್ಲರನ್ನೂ ಆರೋಗ್ಯ ತಪಾಸಣೆಗೆ ಒಳಪಡಿಸಲಾಗುವುದು. ವಿಕಲಚೇತನ ವಿದ್ಯಾರ್ಥಿಗಳನ್ನುಶಿಬಿರಕ್ಕೆಕರೆತರುವನಿಟ್ಟಿನಲ್ಲಿವಿವಿಧ ಶಾಲೆಯ ಶಿಕ್ಷಕರು ಹೆಚ್ಚು ಪರಿಶ್ರಮವಹಿಸಿದ್ದಾರೆ. ಶಿಕ್ಷಣ ಇಲಾಖೆಯ ಯಾವುದೇ ಯೋಜನೆಯನ್ನು ಯಶಸ್ವಿಗೊಳಿಸುವುದರಲ್ಲಿ ಹಿನ್ನಡೆಯಾಗದಂತೆ ಎಲ್ಲರೂ ಜಾಗ್ರತೆ ವಹಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಮೂಳೆ ತಜ್ಞ ಡಾ.ಬಿ.ಆರ್. ಮಂಜಪ್ಪ, ಮಾನಸಿಕ ತಜ್ಞ ಡಾ.ಮಂಜುನಾಥ, ಹೃದಯರೋಗ ತಜ್ಞ ಡಾ.ಅಮೀತ್‌ಗುಪ್ತ, ಅಕ್ಷರ ದಾಸೋಹ ಅಧಿಕಾರಿ ಮಂಜುನಾಥ, ಬಿಆರ್‌ಸಿ ತಿಪ್ಪೇಸ್ವಾಮಿ, ರಾಜೀವ್ ಭಾಗವಹಿಸಿದ್ದರು.

### ತ್ರೈಮಾಸಿಕ ಕೆಡಿಪಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಪಂಚಾಯತ್ 2024–25ನೇ ಸಾಲಿನ ಅಕ್ಟೋಬರ್ ಅಂತ್ಯದವರೆಗಿನ ಎರಡನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಇದೇ ನ.13ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

---

**ಈ.ತುಕಾರಾಮ್ ಅವರು ಕ್ಷೇತ್ರದ ಅಭಿವೃದ್ಧಿಗಾಗಿ ಸದಾ ಕಾತರಿಸುತ್ತಾ ಕೆಲಸ ಮಾಡುವ ಶಾಸಕರಾಗಿದ್ದರು, ಈಗ ಸಂಸದರಾಗಿದ್ದಾರೆ. ಅನ್ನಪೂರ್ಣಮ್ಮ ನನ್ನ ಆತ್ಮೀಯ ಸ್ನೇಹಿತನ ಮಗಳು. ಇವರನ್ನು ಗೆಲ್ಲಿಸಿ ಕಳುಹಿಸಿ, ಮೂರೂವರೆ ವರ್ಷ ನಮ್ಮದೇ ಸರ್ಕಾರ ಇರತ್ತೆ: ಸಂಡೂರಿನ ಅಭಿವೃದ್ಧಿ ಜೋರಾಗತ್ತೆ. ಕಾಂಗ್ರೆಸ್ ಗೆಲ್ಲಿಸಿ ಕಳುಹಿಸಿ: ಸಿ.ಎಂ.ಸಿದ್ದರಾಮಯ್ಯ ಕರೆ**

# ಬಿಜೆಪಿಯ ಮನೆ ದೇವರು ಸುಳ್ಳು: ಸಿಎಂ

» ಸಂಡೂರು

ಅನ್ನಪೂರ್ಣಮ್ಮ ನನ್ನ ಆತ್ಮೀಯ ಸ್ನೇಹಿತನ ಮಗಳು. ಇವರನ್ನು ಗೆಲ್ಲಿಸಿ ಕಳುಹಿಸಿ*

*ಮೂರೂವರೆ ವರ್ಷ ನಮ್ಮದೇ ಸರ್ಕಾರ ಇರತ್ತೆ: ಸಂಡೂರಿನ ಅಭಿವೃದ್ಧಿ ಜೋರಾಗತ್ತೆ. ಕಾಂಗ್ರೆಸ್ ಗೆಲ್ಲಿಸಿ ಕಳುಹಿಸಿ:

ಸಂಡೂರು ವಿಧಾನಸಭಾ ಕ್ಷೇತ್ರದ ಬೊಮ್ಮಘಟ್ಟದಲ್ಲಿ ನಡೆದ ಬೃಹತ್ ಜನ ಸಮಾವೇಶದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣಮ್ಮ ಅವರ ಗೆಲುವಿಗೆ ಪ್ರಚಾರ ನಡೆಸಿ ಮಾತನಾಡಿದರು.

ಈ.ತುಕಾರಾಮ್ ಅವರು ಕ್ಷೇತ್ರದ ಅಭಿವೃದ್ಧಿಗಾಗಿ ಸದಾ ಕಾತರಿಸುತ್ತಾ ಕೆಲಸ ಮಾಡುವ ಶಾಸಕರಾಗಿದ್ದರು, ಈಗ ಸಂಸದರಾಗಿದ್ದಾರೆ. ಸಂಡೂರಿನಲ್ಲಿ ಈಗ ಆಗಿರುವ ಎಲ್ಲಾ ಅಭಿವೃದ್ಧಿಗಳೂ ಈ.ತುಕಾರಾಮ್ ಮತ್ತು ಸಂತೋಷ್ ಲಾಡ್ ಅವರ ಅವಧಿಯಲ್ಲಿ ಆಗಿರುವಂಥವು.

ಕಾಂಗ್ರೆಸ್ ಸ್ವಾತಂತ್ರ್ಯ ಹೋರಾಟದ ಅವಧಿಯಿಂದಲೂ ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯದ ಪರವಾಗಿದೆ. ಬಿಜೆಪಿ ಸ್ವಾತಂತ್ರ್ಯ ಹೋರಾಟದಲ್ಲೂ ಜನರ ಪರವಾಗಿ ಇರಲಿಲ್ಲ. ಈಗಲೂ ಇಲ್ಲ.

ಪ್ರಧಾನಿ ನರೇಂದ್ರ ಮೋದಿಯವರು "ನಾ ಖಾವೋಂಗಾ–ನಾ ಖಾನೆ ದೂಂಗಾ" ಎಂದು ಭಾಷಣ ಮಾಡುತ್ತಾರೆ. ಆದರೆ ಜನಾರ್ಧನರೆಡ್ಡಿಯನ್ನು ಬಿಜೆಪಿಗೆ ಸೇರಿಸಿಕೊಂಡಿದ್ದಾರೆ. ಜನಾರ್ದನ ರೆಡ್ಡಿಯನ್ನು ನ್ಯಾಯಲಯವೇ ಅಪರಾಧಿ ಎಂದು ಘೋಷಿಸಿ ಜೈಲಿಗೆ ಹಾಕಿತು. ಬಿಜೆಪಿಗಾಗಲಿ, ಮೋದಿಗಾಗಲಿ



ಭ್ರಷ್ಟಾಚಾರದ ವಿರುದ್ಧ ಮಾತನಾಡುವ ಯೋಗ್ಯತೆ ಇದೆಯಾ ಎಂದು ಪ್ರಶ್ನಿಸಿದರು.

ಬಿಜೆಪಿ ಅಧಿಕಾರದಲ್ಲಿದ್ದಷ್ಟೂ ದಿನ ಸಂಡೂರಿಗೆ ಒಂದೇ ಒಂದು ಮನೆ ಕೊಡುವ ಯೋಗ್ಯತೆ ಇರಲಿಲ್ಲ. ಆಪರೇಷನ್ ಕಮಲದ ಮೂಲಕ ಜನ ಗೆಲ್ಲಿಸಿದ ಕಾಂಗ್ರೆಸ್ ಸರ್ಕಾರವನ್ನು ಬೀಳಿಸಿ ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದು ಲೂಟಿ ಮಾಡಿಕೊಂಡು ಹೋದರು. ಅದಕ್ಕೇ ಆಪರೇಷನ್ ಕಮಲದ ಸರ್ಕಾರವನ್ನು ಜನ ಸೋಲಿಸಿ ನಮ್ಮ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದರು.

ನಾವು ಅಧಿಕಾರಕ್ಕೆ ಬಂದ 8 ತಿಂಗಳಲ್ಲೇ ಐದಕ್ಕೆ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ. ನುಡಿದಂತೆ ನಡೆದಿದ್ದೇವೆ. ಒಂದು ಕೋಟಿ ಇಪ್ಪತ್ತು ಲಕ್ಷ ಕುಟುಂಬಗಳ ಯಜಮಾನಿ ಮಹಿಳೆಯರಿಗೆ ಪ್ರತೀ ತಿಂಗಳು 2000 ರೂಪಾಯಿ ಕೊಡ್ತಾ ಇರೋದು ನಮ್ಮ ಸರ್ಕಾರ. 1 ಕೋಟಿ 61 ಲಕ್ಷ ಕುಟುಂಬಗಳಿಗೆ ಉಚಿತ ಕರೆಂಟ್ ಕೊಡ್ತಾ ಇರೋದು ನಾವು. ಐದು ಕೆಜಿ ಅಕ್ಕಿ ಜೊತೆಗೆ ಐದು ಕೆಜಿ ಅಕ್ಕಿಯ ಹಣವನ್ನೂ ಕೊಡ್ತಾ ಇರೋದು ನಾವು. ಹೀಗೆ ಐದಕ್ಕೆ ಐದೂ ಗ್ಯಾರಂಟಿಗಳ ಮೂಲಕ ಸಂಡೂರಿನ ಜನರಿಗೆ, ರಾಜ್ಯದ ಜನರಿಗೆ ಆರ್ಥಿಕ ಶಕ್ತಿ ಕೊಡ್ತಾ ಇರೋದು ನಾವು. ನಮ್ಮ ಕಾಂಗ್ರೆಸ್ ಸರ್ಕಾರ. ಬಿಜೆಪಿ ಅಧಿಕಾರದಲ್ಲಿರುವ ಯಾವ ರಾಜ್ಯಗಳಲ್ಲೂ ಃಎಕ ಏಕೆ ಜಾರಿ ಮಾಡಿಲ್ಲ ಎನ್ನುವುದನ್ನು ಜನರಿಗೆ ಉತ್ತರಿಸಬೇಕು ಎಂದರು.

> BJP ಯವರಿಗೆ ಸಂಡೂರಿನ ಗುಡ್ಡಗಳು, ಗಣಿಗಳ ಮೇಲೆ ಮಾತ್ರ ಪ್ರೀತಿ. ಃಎಕ ಯವರಿಗೆ ಸಂಡೂರಿನ ಜನರ ಬಗ್ಗೆ, ಸಂಡೂರಿನ ಬಡವರ ಮೇಲೆ ಖಂಡಿತಾ ಪ್ರೀತಿ ಇಲ್ಲ. ನಾನು ಸುಡುಗಾಡಿಗೆ ಹೋಗುವವರೆಗೂ ಸಂಡೂರಿನ ಜನರ ಋಣದಲ್ಲಿ ಇರ್ತೀನಿ. ನನ್ನಪ್ಪ ಇಲ್ಲೇ ಸತ್ತ. ನನ್ನ ದೊಡ್ಡಪ್ಪ ಇಲ್ಲೇ ಸತ್ತ. ನಾನು ಜೀವ ಇರುವವರೆಗೂ ಇಲ್ಲೇ ಈರ್ತೀನಿ. ಇಲ್ಲೇ ಸಾಯ್ತೀನಿ.
>
> » **ಸಚಿವ ಸಂತೋಷ್ ಲಾಡ್**

ಸಂಡೂರಿನಅಭಿವೃದ್ಧಿಗೆಈ.ತುಕಾರಾಮ್ ಮತ್ತು ಇವರ ಧರ್ಮಪತ್ನಿ ಅನ್ನಪೂರ್ಣಮ್ಮ ಅವರು ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದಾರೆ. ಅನ್ನಪೂರ್ಣಮ್ಮ ಗೆದ್ದರೆ ಸಂಡೂರಿನ ಅಭಿವೃದ್ಧಿ ಕೆಲಸಗಳು ಸರಾಗವಾಗಿ, ವೇಗವಾಗಿ ಮುಂದುವರೆಯುತ್ತವೆ ಎಂದರು.ಅನ್ನಪೂರ್ಣಮ್ಮ ನನ್ನ ಆತ್ಮೀಯ ಸ್ನೇಹಿತನ ಮಗಳು. ಇವರನ್ನು ಗೆಲ್ಲಿಸಿ ಕಳುಹಿಸಿ ಸಂಡೂರಿನ ಜನರಿಗೆ ತುಂಬಾ ಅನುಕೂಲಗಳಾಗುತ್ತವೆ ಎಂದರು.

---

# ಆಯೋಗಕ್ಕೆ ನಾಳೆಯೇ ನ್ಯಾಯಮೂರ್ತಿ ನೇಮಕ

## ಮಾದಿಗ ಸಮುದಾಯಕ್ಕೆ ಬೇಕಿಲ್ಲ ಆತಂಕ: ಮಾಜಿ ಸಚಿವ ಆಂಜನೇಯ ಹೇಳಿಕೆ

» ಚಿತ್ರದುರ್ಗ


ಆಂಜನೇಯ ನಿನ್ಯಾಕೆಚಿಂತೆ ಮಾಡ್ತಿಯಾ, ನನ್ನ ಮೇಲೆ ನಂಬಿಕೆ ಇಲ್ವಾ, ನನಗೆ ರಾಜಕಾರಣಕ್ಕಿಂತಲೂ ಸಾಮಾಜಿಕ ನ್ಯಾಯ ಮುಖ್ಯ.ನಿನಗೆ ಗೊತ್ತುತಾನೇ? ಒಳಮೀಸಲಾತಿ ಜಾರಿಗೊಳಿಸಿಯೇ ಸಿದ್ಧ ಎಂದು ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆಎಂದು ಮಾಜಿ ಸಚಿವಎಚ್.ಆಂಜನೇಯ ಹೇಳಿದ್ದಾರೆ.

ಸಂಡೂರು ವಿಧಾನಸಭಾಕ್ಷೇತ್ರದಚೋರ 'ನೂರುಗ್ರಾಮದಲ್ಲಿ ಬುಧವಾರ ಆಯೋಜಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಸಂದರ್ಭ ಸಿಎಂ ಸಿದ್ದರಾಮಯ್ಯ ನನ್ನೊಂದಿಗೆಚರ್ಚೆ ನಡೆಸಿದ ವೇಳೆ ಈ ಭರವಸೆ ನೀಡಿದ್ದಾರೆಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.ಆದಿಜಾಂಬ ಸಮುದಾಯಕ್ಕೆಆತಂಕ ಬೇಕಿಲ್ಲ. ನಿನಗೂ ಅಷ್ಟೇ. ಒಳಮೀಸಲಾತಿ ಜಾರಿಗೊಳಿಸುವುದು ನನ್ನ ಬದ್ಧತೆಆಗಿದೆ. ಆದ್ದರಿಂದಲೇ ಒಳಮೀಸಲಾತಿ ಜಾರಿಗೊಳಿಸಿದ ಸಂದರ್ಭಯಾವುದೇರೀತಿ ಕಾನೂನು ತೊಡಕುಆಗದರೀತಿಎಚ್ಚರಿಕೆ ಹೆಜ್ಜೆಇಡಲು ದಿಟ್ಟಕ್ರಮಕೈಗೊಂಡಿದ್ದೇನೆಎಂದು ಹೇಳಿದ್ದಾರೆ.

ಆದ್ದರಿಂದಲೇದತ್ತಾಂಶ ಪಡೆಯಲುಆಯೋಗರಚಿಸಲು ಸಚಿವ ಸಂಪುಟದಲ್ಲಿಒಪ್ಪಿಗೆ ಪಡೆಯಲಾಗಿದೆ. ಆಯೋಗಕ್ಕೆ ನ್ಯಾಯಮೂರ್ತಿ ನೇಮಕ ವಿಳಂಬ ಆಗಿಲ್ಲ. ನಾಳೆಯೇ ನ್ಯಾಯಮೂರ್ತಿಯೊಬ್ಬರನು ಆಯೋಗದಅಧ್ಯಕ್ಷರನ್ನಾಗಿ ನೇಮಕ ಮಾಡುವೆ. ಈ ವಿಷಯದಲ್ಲಿಯಾಕಪ್ಪ ನಿನಗೆ ಆತಂಕಎಂದು ಪ್ರಶ್ನೀಸಿದರು ಎಂದುಆಂಜನೇಯ ತಿಳಿಸಿದ್ದಾರೆ.

ಎಸ್‌ಸಿಎಸ್‌ಪಿ, ಟಿಎಸ್‌ಪಿ





ಕಾಯ್ದೆಜಾರಿಗೆತಂದಿದ್ದು, ಕಾಮಗಾರಿಗುತ್ತಿಗೆಯಲ್ಲಿ ಎಸ್ಸಿ, ಎಸ್ಟಿಗೆ ಮೀಸಲಾತಿ ಜಾರಿಗೊಳಿಸಿದ್ದು ಯಾರೂ? ನಾನೇ ತಾನೇ. ಅದೇರೀತಿ ಒಳಮೀಸಲಾತಿಯನ್ನು ನಾನೇ ಜಾರಿಗೊಳಿಸುವೆ ಎಂದಿದ್ದಾರೆಎಂದು ಮಾಹಿತಿ ನೀಡಿದ್ದಾರೆ.

ಕಾಂಗ್ರೆಸ್ ಪಕ್ಷಎಲ್ಲ ವರ್ಗದ ಬಡವರ ಪರ ಆಡಳಿತ ನಡೆಸುತ್ತದೆ. ಅದರಲ್ಲೂ ನಾವೇ ಪ್ರಾಣಾಳಿಕೆಯಲ್ಲಿ ಹೇಳಿದ ಭರವಸೆಈಡೇರಿಸುವುದು ನಮ್ಮ ಪ್ರಥಮಆದ್ಯತೆ, ಬದ್ಧತೆಆಗಿದೆ. ಆದ್ದರಿಂದಆದಿಜಾಂಬವ ಸಮುದಾಯಯಾವುದೇರೀತಿ ಸಂಶಯ ಪಡುವುದು ಬೇಡಎಂದಿದ್ದಾರೆಎಂದು ಹೇಳಿದ್ದಾರೆ.

ರಾಜಕೀಯಕಾರಣಕ್ಕೆ, ಚುನಾವಣೆಯಲ್ಲಿ ಮತಗಳಿಕೆಗಾಗಿ ವಿಪಕ್ಷದವರು ನಮ್ಮ ಮೇಲೆ ಸುಳ್ಳು ಆರೋಪ ಮಾಡುತ್ತಾರೆ. ಅದಕ್ಕೆಲ್ಲ ಗಮನ ಕೊಡುವುದು ಬೇಡ. ನನ್ನ ಮತ್ತುಕಾಂಗ್ರೆಸ್ ಆಡಳಿತದಲ್ಲಿ ಅಹಿಂದ ವರ್ಗಕ್ಕೆ ಸದಾ ಒಳಿತನ್ನೇ ಮಾಡಲಾಗಿದೆ. ಮುಂದೆಯೂ ಮಾಡುತ್ತೇವೆ. ಎಂತಹ ಷಡ್ಯಂತ್ರ ನಡೆಸಿದರೂ ನಾನು ಹಾಗೂ ನನ್ನಕಾಂಗ್ರೆಸ್ ಪಕ್ಷ ನೊಂದಜನರ ಪರ ಕಾನೂನು, ಯೋಜನೆರೂಪಿಸುವಲ್ಲಿ ಹೆಜ್ಜೆ ಹಿಂದಿಡುವುದಿಲ್ಲ. ಈಗಾಗಲೇಉದ್ಯೋಗ ನೇಮಕಾತಿಗೆತಡೆ ಹಾಕಿದ್ದೇವೆ. ಅದರರ್ಥ ನಾವು ಒಳಮೀಸಲಾತಿಯನ್ನು ಶೀಘ್ರ ಜಾರಿಗೊಳಿಸುವ ಬದ್ಧತೆ ಹೊಂದಿದ್ದೇವೆಎಂದರ್ಥಎಂದು ಸಿದ್ದರಾಮಯ್ಯ ಚರ್ಚೆ ವೇಳೆ ಸಿದ್ದರಾಮಯ್ಯ ಅಭಯ ನೀಡಿದ್ದಾರೆಎಂದು ತಿಳಿಸಿದ್ದಾರೆ.

# ವಾದಾ ದಿಯಾ- ಪೂರಾ ಕಿಯಾ: ಸಿ.ಎಂ.ಸಿದ್ದರಾಮಯ್ಯ

## ಮಹಾರಾಷ್ಟ್ರ ಬಿಜೆಪಿಯ ಸುಳ್ಳು ಜಾಹಿರಾತಿಗೆ ಅವರದೇ ಶೈಲಿಯಲ್ಲಿ ಸಿದ್ದರಾಮಯ್ಯ ಗುದ್ದು

## BJP ಮಹಾರಾಷ್ಟ್ರದ ಜನರನ್ನು ಸರಣಿ ಸುಳ್ಳುಗಳ ಮೂಲಕ ವಂಚಿಸುತ್ತಿದೆ: ಸಿ.ಎಂ

**ಸಂಡೂರು:** ವಾದಾ ದಿಯಾ: ಪೂರಾ ಕಿಯಾ ಎಂದು ಸಿ.ಎಂ.ಸಿದ್ದರಾಮಯ್ಯ ಅವರು ಬಿಜೆಪಿಯ ಸುಳ್ಳು ಜಾಹಿರಾತಿಗೆ ಕಪಾಳಮೋಕ್ಷ ಮಾಡಿದರು. ಸಂಡೂರು ಚುನಾವಣಾ ಪ್ರಚಾರದ ವೇದಿಕೆಯಲ್ಲೇ ಈ ಹೇಳಿಕೆ ನೀಡಿದರು.ಮಹಾರಾಷ್ಟ್ರದ ಬಿಜೆಪಿ "ಕರ್ನಾಟಕ ಸರ್ಕಾರ ವಾದಾ ಕಿಯಾ: ಧೋಖಾ ದಿಯಾ" ಎಂದು ಸುಳ್ಳು ಜಾಹಿರಾತು ನೀಡಿದೆ. ಕರ್ನಾಟಕದಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಭರವಸೆ ನೀಡಿತ್ತು. ಭರವಸೆ ಈಡೇರಿಸದೇ, ಯೋಜನೆಯನ್ನೇ ಇನ್ನೂ ಆರಂಭಿಸದೆ ವಂಚಿಸಿದೆ ಎನ್ನುವ ಅರ್ಥದ ಪರಮ ಸುಳ್ಳಿನ ಜಾಹಿರಾತುಗಳನ್ನು ಪುಟಗಟ್ಟಲೆ ನೀಡಿದೆ. ಈ ಸುಳ್ಳಿನ ಜಾಹಿರಾತನ್ನು ಉಲ್ಲೇಖಿಸಿದ ಸಿಎಂ ಸಿದ್ದರಾಮಯ್ಯ ಅವರು ಅವರದೇ ಶೈಲಿಯಲ್ಲಿ ಉತ್ತರಿಸಿ, "ವಾದಾ ದಿಯಾ ಪೂರಾ ಕಿಯಾ" ಎಂದು ವ್ಯಂಗ್ಯವಾಗಿ ತಿರುಗೇಟು ನೀಡಿದರು.

**ಸುಳ್ಳೇ ಬಿಜೆಪಿಯ ಮನೆ ದೇವರು: ಸಿಎಂ–** ಬಿಜೆಪಿಯವರಿಗೆ ಸುಳ್ಳೇ ಮನೆ ದೇವರು. ರಾಜ್ಯದಲ್ಲಿ ಶಕ್ತಿ ಯೋಜನೆ ಸೇರಿದಂತೆ ಐದಕ್ಕೆ ಐದೂ ಗ್ಯಾರಂಟಿಗಳು ಯಶಸ್ವಿಯಾಗಿ ನಡೆದುಕೊಂಡು ಹೋಗುತ್ತಿದೆ. ಗೃಹಲಕ್ಷ್ಮಿಯ ಮುಂದಿನ ಕಂತಿನ ಹಣ ಒಂದೆರಡು ದಿನಗಳಲ್ಲೇ ಬಿಡುಗಡೆ ಕೂಡ ಆಗುತ್ತದೆ. ಆದರೆ ಬಿಜೆಪಿಯವರು ಸುಳ್ಳುಗಳನ್ನು ಹರಡಿಸುತ್ತಾ, ಸುಳ್ಳುಗಳನ್ನು ಹರಡುವುದಕ್ಕೇ ಕೋಟಿ ಕೋಟಿ ಖರ್ಚು ಮಾಡುತ್ತಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು.

**ಮೋದಿ ಹೇಳಿದ್ದೇನು ? ಮಾಡಿದ್ದೇನು?:** ವಿದೇಶದಲ್ಲಿರುವ ಕಪ್ಪುಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಕೊಡ್ತೀವಿ ಅಂತ ಹೇಳಿದ್ರಲ್ಲಾ ಮೋದಿಯವರೇ ಕೊಟ್ರೇನ್ರೀ? ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀನಿ ಅಂದ್ರಲ್ಲಾ ಮೋದಿಯವರೇ, ಉದ್ಯೋಗ ಸೃಷ್ಟಿ ಮಾಡಿದ್ರಾ ? ಎಲ್ರೀ ಸ್ವಾಮಿ ನಿಮ್ಮ ಅಚ್ಚೆ ದಿನ್? ಎಂದು ವ್ಯಂಗ್ಯವಾಡಿದರು.

---

**ಪ್ರಮುಖ ಸುದ್ದಿ**

# ಗಮನ ಸೆಳೆದ ಮಕ್ಕಳ ಚಿತ್ರಕಲೆಯ ಕಾರ್ಯಾಗಾರ

» ಚಿತ್ರದುರ್ಗ

ಬಾಲಕಿಯರ ಸರ್ಕಾರಿ ಪ್ರೌಢಶಾಲೆ, ಚೇಳೂರು,ಗುಬ್ಬಿತಾಲೂಕು,ತುಮಕೂರಿನಲ್ಲಿ ಚಿತ್ರಕಲಾ ಶಿಕ್ಷಕರರಾದ ಆನಂದ್ ಎಸ್ ವಿ ರವರು ಮುಖ್ಯ ಶಿಕ್ಷಕರಾದ ಗಿರೀಶ್ ಜಿ ಎಚ್ ರವರ ಸಹಕಾರದಿಂದ ತಮ್ಮ ಶಾಲೆಯಲ್ಲಿ ಗ್ರಾಮೀಣ ಭಾಗದಿಂದ ಬರುವ ಮಕ್ಕಳಿಗಾಗಿ ಚಿತ್ರಕಲೆಯ ವಿಷಯಗಳ ಬಗ್ಗೆ ಮತ್ತು ಅದರ ಪ್ರಕಾರಗಳ ಬಗ್ಗೆ ಪರಿಚಯಿಸುವ ಉದ್ದೇಶದಿಂದ ಚಿತ್ರಕಲಾ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದರು. ಇಲ್ಲಿ ಚಿತ್ರಕಲೆಯ ವಿಷಯಗಳು ಅವುಗಳ ಅವಶ್ಯಕತೆ ಮತ್ತು ಮಹತ್ವದ ಬಗ್ಗೆ ತಿಳಿಸಲಾಯಿತು. ಅಂಕ ಗಳಿಕೆಯ ಹುಚ್ಚು ಪೈಪೋಟಿಯ ನಡುವೆ ಮಕ್ಕಳ ಮನಸ್ಸನ್ನು ಮುಧಗೊಳಿಸಿ, ಶಾಲಾ ಶೈಕ್ಷಣಿಕ ಚಟುವಟಿಕೆಗಳಿಗೆ ಹದಗೊಳಿಸುವ ಈ ಕಾರ್ಯಾಗಾರವು ಕ್ರಿಯಾಶೀಲವಾಗಿ ನಡೆದಿರುವುದು ಶಾಲೆಯ ಮಕ್ಕಳು, ಶಿಕ್ಷಕರು ಮತ್ತು ಪೋಷಕರಿಗೆ ಅರ್ಥಪೂರ್ಣವೆನಿಸಿದೆ. ಇಂದು ರಂಗೋಲಿ ಕಲೆಯು ಭಾರತೀಯ ಚಿತ್ರಕಲೆಯ ಒಂದು ಪ್ರಕಾರವಾಗಿ ಗುರುತಿಸಲ್ಪಟ್ಟಿದೆ. ರಂಗೋಲಿಗೆ



ಭಾರತೀಯ ಜನಪದದ ಪುರಾತನ ಮಹತ್ವವಿದೆ. ಶುಭದ ಸಂಕೇತವಾಗಿ ನೆಲದ ಮೇಲೆ ಬಿಡಿಸಲಾಗುವ ಈ ರಂಗೋಲಿಯನ್ನು ಬಾಗಿಲ ಅಂಚು ಮತ್ತು ಗೋಡೆಗಳ ಅಂಚುಗಳನ್ನು ಅಲಂಕರಿಸಲು ಬಳಸಲಾಗುತ್ತದೆ. ಬದಲಾದ ಸನ್ನಿವೇಶದಲ್ಲಿ ಅಳಿವಿನಂಚಿನಲ್ಲಿ ಇರುವ ಈ ರಂಗೋಲಿ ( ಕೋಲಂ ) ಕಲೆಯ ಬಗ್ಗೆ ಪೂರ್ಣ ಮಾಹಿತಿ ನೀಡುವುದರ ಜೊತೆಗೆ ಮಕ್ಕಳಿಗೆ ಮರದ ಹಲಗೆಯ ಬ್ಲಾಕ್ ಗಳ ಮೇಲೆ, ವಿವಿಧ ರೀತಿಯ ವಿನ್ಯಾಸಗಳ ಮೂಲಕ ಕ್ರಿಯಾಶೀಲವಾಗಿ ಚಿತ್ರರಚನೆ ಮಾಡಿಸಿದರು. ಕೋಲಮ್ ಆರ್ಟ್ ಕಾರ್ಯಾಗಾರವು ಎರಡು ದಿನಗಳು ನಡೆದಿದ್ದು ಸುಮಾರು 150 ಕ್ಕೂ ಹೆಚ್ಚು ಕಲಾ ಕೃತಿಗಳು ರಚನೆಯಾದವು.

ನಂತರದ ಮೂರು ದಿನಗಳ ಕಾಲ ಗ್ಲಾಸ್ ಪೇಂಟಿಂಗ್ ವಿಷಯದ ಬಗ್ಗೆ ಮಾಹಿತಿಯನ್ನು ನೀಡಿ, ಅದರ ಮಾಧ್ಯಮ, ಶೈಲಿಯ ಬಗ್ಗೆ ತಿಳಿಸಿ ವರ್ಣಗಳ ಮೂಲಕ ಗ್ಲಾಸ್ ಗಳ ಮೇಲೆ ಚಿತ್ರ ರಚನೆ ಅಭ್ಯಾಸವನ್ನು ಮಕ್ಕಳಿಗೆ ಹೇಳಿಕೊಡಲಾಯಿತು.

ಗ್ಲಾಸ್ ಗಳ ಮೇಲೆ ಮಕ್ಕಳು ವಿವಿಧ ರೀತಿಯ ನಿಸರ್ಗ ಚಿತ್ರ, ಪ್ರಾಣಿ– ಪಕ್ಷಿಗಳ ಚಿತ್ರ , ಅಲಂಕಾರಿಕ ಚಿತ್ರಗಳನ್ನು ಮತ್ತು ಇನ್ನು ಮುಂತಾದ ವಿಷಯಗಳನ್ನು ಆಯ್ಕೆ ಮಾಡಿಕೊಂಡು ವಿಭಿನ್ನವಾಗಿ ವರ್ಣಗಳ ಮೂಲಕ ಚಿತ್ರರಚನೆಯನ್ನು ಮಕ್ಕಳು ತುಂಬಾ ಪರಿಣಾಮಕಾರಿಯಾಗಿ ಮಾಡಿದರು. ಈ ಕಾರ್ಯಗಾರದಲ್ಲಿ ಆರು ಶಾಲೆಗಳ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಕಾರ್ಯದಲ್ಲಿ 60 ಕ್ಕು ಹೆಚ್ಚು ಕಲಾಕೃತಿಗಳು ರಚನೆಗೊಂಡು ಎಲ್ಲರ ಗಮನ ಸೆಳೆದವು. ಈ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಕೋಲಂ ಆರ್ಟ್– ಹೇಮಾ ಪಿ, ಚಿತ್ರಕಲಾ ಶಿಕ್ಷಕರು, ಜಿ ಹ□□□ಸ್, ಗೋಡೆಕೆರೆ, ಚೀನಾಹಳ್ಳಿ, ಗ್ಲಾಸ್ ಪೇಂಟಿಂಗ್– ರೇಖಾ, ಚಿತ್ರಕಲಾ ಶಿಕ್ಷಕರು, ಜಿ ಹೆಚ್ ಎಸ್ ಸಾಕ್ಷಿಹಳ್ಳಿ, ಶಿರಾ ತಾಲೂಕು, ಈ ಕಾರ್ಯಾಗಾರವನ್ನ ಉತ್ತಮವಾಗಿ ನಿರ್ವಹಿಸಿದರು.

ಶಿಬಿರದಲ್ಲಿ ಜಗದೀಶ ಡಿ, ಕಲಾವಿದರು ಹಾಗೂ ಚಿತ್ರಕಲಾ ಶಿಕ್ಷಕರು, ಕಮಲ ಬಿ, ಜಿ ಜಿ ಜೆ ಸಿ ಗುಬ್ಬಿ, ಉಷಾರಾಣಿ, ಕೆಪಿಎಸ್ ಕಡಬ, ಚಂದ್ರಮೌಳೇಶ್ವರ ಜೆ ಜೆ ಸಿ ಗುಬ್ಬಿ, ಸವಿತಾ ಎಸ್ ಖಾಂದರೆ, ಜಿ ಬಿ ಹೆಚ್ ಎಸ್ ಚೇಳೂರು. ಈ ಎಲ್ಲಾ ಕಲಾವಿದರು ಮಕ್ಕಳಿಗೆ ಐದು ದಿನಗಳ ಕಾಲ ಕಲಾಕೃತಿ ರಚನೆಯಲ್ಲಿ ತೊಡಗಿಸಿಕೊಳ್ಳುವುದರ ಜೊತೆಗೆ ಮಕ್ಕಳಿಂದ ಉತ್ತಮ ಕಲಾಕೃತಿಗಳನ್ನು ರಚನೆ ಮಾಡಿಸಿದರು. ಕೊನೆಯ ದಿನ ಚಿತ್ರಕಲಾ ಪ್ರದರ್ಶನವನ್ನು ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಾಗಾರವು ಯಶಸ್ವಿಯಾಗಲು ಸಹಕರಿಸಿದ ಎಲ್ಲರಿಗೂ, ಕಲಾಕೃತಿಗಳನ್ನು ರಚಿಸಿದ ಮಕ್ಕಳಿಗೆ ಶಾಲೆಯ ಮುಖ್ಯ ಶಿಕ್ಷಕರಾದ ಶ್ರೀ ಗಿರೀಶ್ ಜಿ ಎಚ್ ರವರು ಅಭಿನಂದಿದರು. ಜೊತೆಗೆ ಮಕ್ಕಳ ಪ್ರತಿಭೆಯ ಬಗ್ಗೆ ವರ್ಣನೆ ಮಾಡಿದರು.ಪ್ರದರ್ಶನವನ್ನು ವೀಕ್ಷಿಸಲು ತುಮಕೂರು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಯ ಚಿತ್ರಕಲಾ ಉಪನ್ಯಾಸಕರಾದ ಶ್ರೀ ಶ್ರೀನಿವಾಸಮೂರ್ತಿ ರವರು ಆಗಮಿಸಿ ಪ್ರದರ್ಶನ ವೀಕ್ಷಿಸಿ ಇಂತಹ ಶಿಬಿರಗಳು ಎಲ್ಲ ಶಾಲೆಗಳಲ್ಲಿಯೂ ನಡೆಯಬೇಕು, ಇವು ಶಾಲಾ ವಾತಾವರಣವನ್ನು ಜೀವಂತಿಕೆಯಲ್ಲಿಡುತ್ತವೆ. ಮಕ್ಕಳಿಂದ ಉತ್ತಮ ಕಲಾಕೃತಿಗಳನ್ನು ಹೊರತಂದಿರುವುದು ಖುಷಿ ತಂದಿದೆ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು. ಇಂತಹ ಉತ್ತಮವಾದಂತಹ ಕಾರ್ಯ ಮಾಡಿದ ಚಿತ್ರಕಲಾ ಶಿಕ್ಷಕರಿಗೆ ಅಭಿನಂದನೆಗಳು.

» **ಲೇಖನ: ರಾಘವೇಂದ್ರ ನಾಯಕ ಎನ್ ಟಿ, ಚಿತ್ರಕಲಾ ಕಲಾವಿದರು**

**ಫಾಸ್ಟ್ ನ್ಯೂಸ್**

## ಹಾಲಿಗೊಂಡನಹಳ್ಳಿ ದಾರಿ ಸಮಸ್ಯೆ: ರೈತರಿಂದ ಪ್ರತಿಭಟನೆ



» **ಚಳ್ಳಕೆರೆ**

ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾಲಿಗೊಂಡನಹಳ್ಳಿ ಗ್ರಾಮದ ರಿ.ಸರ್ವೆ,ನಂ, 56-57ರ ಮಧ್ಯೆ ನಕಾಶೆಯಲ್ಲಿ ಬಂಡಿಜಾಡುವಿದ್ದು, ಸದರಿ ಜಮೀನಿನ ರೈತರು ದಾರಿಬಿಡದಂತೆ ಅಡ್ಡಕಟ್ಟಿ ತೊಂದರೆ ಕೊಡುತ್ತಿದ್ದು ದಾರಿ ಬಿಡಿಸಿಕೊಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ನೇತೃತ್ವದಲ್ಲಿ ತಾಲ್ಲೂಕು ಕಚೇರಿಮುಂದೆ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನಕಾರರನ್ನು ಉದ್ದೇಶಿಸಿ ಮಾತನಾಡಿದ ಕೆ.ಪಿ.ಭೂತಯ್ಯ, ಕಳೆದ 2020ರಿಂದಲೂ ನಕಾಶೆಯಲ್ಲಿರುವ ಬಂಡಿಜಾಡನ್ನು ಬಿಡಿಸಿಕೊಡುವಂತೆ ತಾಲ್ಲೂಕು ಆಡಳಿತಕ್ಕೆ ನಿರಂತರ ಮನವಿ ಮಾಡಲಾಗುತ್ತಿದೆ, ಪೊಲೀಸ್ ಇಲಾಖೆಗೂ ಮನವಿ ನೀಡಿದೆ. ಈ ಹಿಂದೆ ತಹಶೀಲ್ದಾರ್ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಕಾಶೆಯಲ್ಲಿರುವಂತೆ ದಾರಿ ಬಿಡಿಸುವ ಭರವಸೆ ನೀಡಿದ್ದರು. ಸುತ್ತಮುತ್ತಲ ಜಮೀನಿನಲ್ಲಿ ಈಗಾಗಲೇ ರೈತರು ಶೇಂಗಾ ಫಸಲನ್ನು ಕಿತ್ತುಕಣಗಳಿಗೆ ಸಾಕಾಟ ಮಾಡಬೇಕಿದೆ. ಆದರೆ, ಮೇಲ್ಕಂಡ ಜಮೀನಿನವರು ತೊಂದರೆ ಕೊಡುತ್ತಿದ್ದು, ಕೂಡಲೇ ತಹಶೀಲ್ದಾರ್ ಮಧ್ಯಪ್ರವೇಶಿಸಿ ನೂರಾರು ಜನರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕೆಂದು ಮನವಿ ಮಾಡಿದರು. ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ಈಗಾಗಲೇ ಸದರಿ ನಕಾಶೆಯಲ್ಲಿರುವಂತೆ ದಾರಿಯನ್ನು ಬಿಡಿಸಲು ಯಾವುದೇ ಕಾನೂನು ತೊಡಕಿಲ್ಲ. ಆದರೂ ಸಹ ಕೆಲ ರೈತರು ಇದಕ್ಕೆ ಅಡ್ಡಿಪಡಿಸುತ್ತಿದ್ದಾರೆ. ಈ ತಿಂಗಳ 12ರ ಮಂಗಳವಾರ ಸ್ಥಳಕ್ಕೆ ಆಗಮಿಸಿ ದಾರಿ ಬಿಡಿಸುವ ಬಗ್ಗೆ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಕೃಷ್ಣಪ್ಪ, ನಿವೃತ್ತ ಉಪಾಧ್ಯಾಯ ಕೆ.ವಿ.ರುದ್ರಮುನಿಯಪ್ಪ, ಸಣ್ಣಹನುಮಪ್ಪ, ಹನುಮಪ್ಪ, ನರಸಮ್ಮ, ಗೀತಮ್ಮ, ಆಶಾ, ವಿಜಯಮ್ಮ ಮುಂತಾದವರು ಪಾಲ್ಗೊಂಡಿದ್ದರು.

## ಆಹಾರ ಮತ್ತು ಪೌಷ್ಠಿಕ ಭದ್ರತೆ- ನ್ಯೂಟ್ರಿ ಸಿರಿಧಾನ್ಯಗಳ ಯೋಜನೆಯಡಿ ಸಿರಿಧಾನ್ಯಗಳ ಬಗ್ಗೆ ಅರಿವು



» **ಹೊಸದುರ್ಗ**

ತಾಲೂಕಿನ ಸಾಣೇಹಳ್ಳಿಯಲ್ಲಿ ನಡೆಯುತ್ತಿರುವ ರಾಷ್ಟ್ರೀಯ ನಾಟಕೋತ್ಸವ ಅಂಗವಾಗಿ ಕೃಷಿ ಇಲಾಖಾ ವತಿಯಿಂದ 2024-25ನೆಯ ಸಾಲಿನ ಆಹಾರ ಮತ್ತು ಪೌಷ್ಠಿಕ ಭದ್ರತೆ-ನ್ಯೂಟ್ರಿ ಸಿರಿಧಾನ್ಯಗಳ ಯೋಜನೆಯಡಿ ಸಿರಿಧಾನ್ಯಗಳ ಬಗ್ಗೆ ಅರಿವು ಮೂಡಿಸಲು ಸಿರಿಧಾನ್ಯಗಳ ರೋಡ್‌ಶೋ ಕಾರ್ಯಕ್ರಮಗಳನ್ನು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಇವರ ಸಹಯೋಗದೊಂದಿಗೆ ಶ್ರೀಮಠದ ಆವರಣದಲ್ಲಿ ಶ್ರೀ ಪಂಡಿತಾರಾಧ್ಯ ಸ್ವಾಮಿಗಳವರು ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನಂತರ ಸಾಣೇಹಳ್ಳಿಯ ಗ್ರಾಮದ ಬೀದಿಗಳಲ್ಲಿ ಸಿರಿಧಾನ್ಯಗಳ ಮಹತ್ವ ಮತ್ತು ಪ್ರಾಮುಖ್ಯತೆಯ ಬಗ್ಗೆ ಗ್ರಾಮಸ್ಥರಲ್ಲಿ ಸಾರ್ವಜನಿಕರಿಗೆ ನಾಗರೀಕರಿಗೆ ಸಿರಿಧಾನ್ಯಗಳ ಬಗ್ಗೆ ಹಾಗೂ ಸಾವಯವ ಕೃಷಿಯ ಬಗ್ಗೆ ಅರಿವು ಮೂಡಿಸಿ ಮಾಹಿತಿ ನೀಡಲಾಯಿತು. ಈ ಸಂದರ್ಭದಲ್ಲಿ ಸಿರಿಧಾನ್ಯಗಳು ಅವಮಾನ ವೈಪರೀತ್ಯಕ್ಕೆ ಹೊಂದಿಕೊಂಡು ಅತೀ ಕಡಿಮೆ ಫಲವತ್ತತೆಯುಳ್ಳ ಭೂಮಿಯಲ್ಲಿ ಬೆಳೆಯಬಲ್ಲ ಉತ್ತಮ ಆಹಾರಧಾನ್ಯಗಳಾಗಿರುತ್ತದೆ ಎಂಬ ಮಾಹಿತಿ ನೀಡಲಾಯಿತು. ಸಿರಿಧಾನ್ಯಗಳು ಉತ್ತಮ ಫಲಿತಾಂಶ ಹೊಂದಿರುವುದರಿಂದ ಆರೋಗ್ಯಕ್ಕೆ ಉತ್ತಮ ಆಹಾರ ಧಾನ್ಯವಾಗಿರುತ್ತದೆ ಎನ್ನುವ ಮಾಹಿತಿಯನ್ನು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರಾದ ಸಿ ಎಸ್ ಈಶರವರು ತಿಳಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಆತ್ಮಯೋಜನೆ ಹಾಗೂ ಇತರೆ ಸಿಬ್ಬಂದಿಗಳು ಮತ್ತು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ಶಿಬಿರದ ನಾಯಕರಾದ ಡಾ. ರವಿಕುಮಾರ, ಡಾ. ಸುಮಂಗಲಾಮೇಟಿ, ರೇಖಾಚಿನ್ನಾಕರ, ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಯೋಗರಾಜ, ಸಂಘಟಕ ಮಲ್ಲೇಶಪ್ಪ, ರಾಜ್ಯದ 26 ಜಿಲ್ಲೆಗಳಿಂದ ಆಗಮಿಸಿದ ರೋವರ್ ಮತ್ತು ರೇಂಜರ್‌ಗಳು ಭಾಗವಹಿಸಿ ಜಾಥಾವನ್ನು ಯಶಸ್ವಿಗೊಳಿಸಿದರು.

# ನ.10ಕ್ಕೆ ಓಬವ್ವಳ ಮಾಲೆ ಧರಿಸಿ ಪಾದಯಾತ್ರೆ

» **ಚಿತ್ರದುರ್ಗ**



ಶ್ರೀ ಜಗದ್ಗುರು ಛಲವಾದಿ ಗುರುಪೀಠ, ಛಲವಾದಿ ಮಹಾಸಭಾ, ಒನಕೆ ಓಬವ್ವ ಸಂರಕ್ಷಣಾ ಸಮಿತಿ ಹಾಗೂ ಸರ್ವ ಸಮಾಜದ ಸಹಯೋಗದೊಂದಿಗೆ ಒನಕೆ ಓಬವ್ವ ಜಯಂತೋತ್ಸವವನ್ನು ನ. 11 ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಒನಕೆ ಒಬವ್ವ ಸಂರಕ್ಷಣಾ ಸಮಿತಿಯ ಅಧ್ಯಕ್ಷರು, ಜಯಂತೋತ್ಸವದ ಸಂಚಾಲಕರಾದ ಛಲವಾದಿ ತಿಪ್ಪೇಸ್ವಾಮಿ ತಿಳಿಸಿದರು.

ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, 17ನೇ ಶತಮಾನದಲ್ಲಿ ಐತಿಹಾಸಿಕ ಚಿತ್ರದುರ್ಗದ ಕೋಟೆಯನ್ನು ಆಕ್ರಮಣಕಾರರ ದಾಳಿಯಿಂದ ರಕ್ಷಿಸಿದ ಕನ್ನಡ ನಾಡು ಮರೆಯದ ಅವಿಸ್ಮರಣೀಯ ಮಹಿಳೆ ವೀರವನಿತೆ ಒನಕೆ ಓಬವ್ವರಾಗಿದ್ದಾರೆ. ಭಾರತ ಕಂಡಂತಹ ಧೀರ ಮಹಿಳೆಯರ ಸಾಲಿನಲ್ಲಿ ವೀರವನಿತೆ ಮಾತೆ ಒನಕೆ ಓಬವ್ವ ಅಗ್ರ ಮಾನ್ಯರಾಗಿರುವುದು ಹೆಮ್ಮೆಯ ಸಂಗತಿಯಾಗಿದೆ. ಈ ವೀರವನಿತೆಯ ಜಯಂತೋತ್ಸವವನ್ನು ಪ್ರತಿ ವರ್ಷ ನವಂಬರ್ 11ರಂದು ಸರ್ಕಾರಿ ನಾಡಹಬ್ಬವಾಗಿ ಆಚರಿಸುವುದು ಅತ್ಯಂತ ಸಂತೋಷದಾಯಕ ವಿಷಯವಾಗಿದೆ ಎಂದರು.

ನ. 10ರ ಭಾನುವಾರ ಸಮಯ ಸಂಜೆ 6 ಗಂಟೆಗೆಓಬವ್ವಳಮಾಲೆಧರಿಸಿಪಾದಯಾತ್ರೆ ಮೂಲಕ ದೊಡ್ಡಸಿದ್ದವನಹಳ್ಳಿಯಿಂದ ಚಿತ್ರದುರ್ಗ ನಗರದ ಉತ್ಸವಾಂಭ ದೇವಸ್ಥಾನಕ್ಕೆ ಪಾದಯಾತ್ರೆ ಮೂಲಕ ಮನೆ-ಮನೆಗೆ ತೆರಳಿ ಭಿಕ್ಷಾಟನೆ ಮೂಲಕ ಅಕ್ಕಿ, ರಾಗಿಯನ್ನು ಹಾಕಿಸಿಕೊಂಡು ಉತ್ಸವಾಂಭ ದೇವಸ್ಥಾನ ತಲುಪಿ ರಾತ್ರಿ ದೇವಸ್ಥಾನದಲ್ಲಿ ವಾಸ ಇದ್ದು ಬೆಳಗ್ಗೆ ಮಡಿ ಪೂಜೆ ಮೂಲಕ ಓಬವ್ವಳ ಸಮಾಧಿ ಹತ್ತಿರ ಹೋಗಿ ಅಕ್ಕಿ, ರಾಗಿಯನ್ನು ಭಿತ್ತಿ ಓಬವ್ವ ಸತ್ತಿಲ್ಲ ಬಿತ್ತವ ಮೂಲಕ ಪ್ರತಿ ಮನೆ-ಮನೆಯಲ್ಲಿ ಓಬವ್ವರಂತಹ ಹೆಣ್ಣು ಮಗಳು ಹುಟ್ಟುತ್ತಾಳೆ ಎಂಬ ಸಂದೇಶ ಸಾರುವ ಕಾರ್ಯಕ್ರಮವಾಗಿರುತ್ತದೆ.

ಛಲವಾದಿ ಮಹಾಸಭಾದ ಅಧ್ಯಕ್ಷರಾದ ಶೇಷಣ್ಣ ಮಾತನಾಡಿ,ನ.11ರ ಸೋಮವಾರ ಬೆಳಿಗ್ಗೆ 7 ಗಂಟೆಗೆ ಮದಕರಿನಾಯಕ ವೃತ್ತದಿಂದ ಡಿ.ಜೆ.ಯೊಂದಿಗೆ 51 ಜಾನಪದ ಕಲಾ ತಂಡಗಳಾದ ಕಾಳೆ ಉರುವೆ, ಟ್ರಾಷ್ ವಾದ್ಯವೃಂದ, ಕಲಾತಂಡದೊಂದಿಗೆ ಓಬವ್ವಳ ಭಾವಚಿತ್ರದೊಂದಿಗೆ ಮೆರವಣಿಗೆ ಸಾಗಿ ಕೋಟೆವರೆಗೆ ಸಾಗುತ್ತದೆ. 9 ಗಂಟೆಯಿಂದ ಕೋಟೆಯ ಮುಂಭಾಗದ ವೇದಿಕೆಯ ಕಾರ್ಯಕ್ರಮದಲ್ಲಿ ಛಲವಾದಿ ಗುರುಪೀಠ, ಶ್ರೀ ಬಸವನಾಗಿದೇವ ಸ್ವಾಮಿಜಿ, ಮಾದಾರ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ, ಸಿದ್ದಯ್ಯನಕೋಟೆಯ ಶ್ರೀ ಬಸವಲಿಂಗ ಮಹಾಸ್ವಾಮಿಗಳು, ಬಂಜಾರ ಗುರುಪೀಠದ ಶ್ರೀ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಸಾನಿಧ್ಯವಹಿಸಲಿದ್ದಾರೆ. ಮಾಜಿ ಶಾಸಕರಾದ ಜಿ.ಹೆಚ್. ತಿಪ್ಪಾರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮವನ್ನು ವಿಧಾನ ಪರಿಷತ್‌ನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣ ಸ್ವಾಮಿ ಉದ್ಘಾಟನೆ ಮಾಡಲಿದ್ದಾರೆ. ಒನಕೆ ಓಬವ್ವನವರ ಸ್ಮಾರಕಕ್ಕೆ ದೀಪ ಹಚ್ಚುವ ಹಾಗೂ ಜೋಳಿಗೆ ಕಾರ್ಯಕ್ರಮಕ್ಕೆ ವಿಧಾನಪರಿಷತ್ ಸದಸ್ಯರು ಹಾಗೂ ಮಾಜಿ ಸಚಿವರಾದ ಸಿ.ಟಿ. ರವಿ ಚಾಲನೆ ನೀಡಲಿದ್ದಾರೆ. ಒನಕೆ ಓಬವ್ವನವರ ಭಾವಚಿತ್ರಕ್ಕೆ ಲೋಕಸಭಾ ಸದಸ್ಯರಾದ ಗೋವಿಂದ ಕಾರಜೋಳ ಪುಷ್ಪಾರ್ಚನೆ ಮಾಡಲಿದ್ದಾರೆ. ಶೋಭಾಯಾತ್ರೆಗೆ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್ ಚಾಲನೆ ನೀಡಲಿದ್ದಾರೆ.

ಬಿ.ಜೆ.ಪಿ. ಮುಖಂಡರಾದ ರುದ್ರಯ್ಯ, ಜಿ.ಪಂ.ಮಾಜಿ ಅಧ್ಯಕ್ಷರಾದ ಶ್ರೀಮತಿ ಸೌಭಾಗ್ಯಬಸವರಾಜನ್‌ಮಾಜಿಶಾಸಕರಾದ ಎಸ್.ಕೆ. ಬಸವರಾಜನ್, ಉದ್ಯಮಿಗಳಾದ ಡಿ.ಎಸ್. ಮಲ್ಲಿಕಾರ್ಜುನ್, ಸುರೇಶ್ ಬಾಬು (ಸೈಟ್ ಬಾಬಣ್ಣ) ನಗರಸಭೆ ಸದಸ್ಯರಾದ ಶ್ರೀನಿವಾಸ, ಜಿಲ್ಲಾಧ್ಯಕ್ಷರಾದ ಮುರಳಿ ಎ.ಡಿ.ವೈ.ಎಸ್.ಪಿ.ತಿರುಮಲೇಶ್, ಡಿ.ಡಿ.ಪಿ.ಐ., ಮಂಜುನಾಥ, ಡಾ॥ ನಾಗವೇಣಿ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮಕ್ಕೆ ಚಿತ್ರದುರ್ಗ ಜಿಲ್ಲೆಯಲ್ಲಿ ಇರುವ ಒನಕೆ ಓಬವ್ವನವರ ಕುಲಬಾಂಧವರು, ಹಿತೈಷಿಗಳು, ಪ್ರೋತ್ಸಾಹದಾತರು, ಸಾರ್ವಜನಿಕರೆಲ್ಲರೂ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ನೆಲ್ಲಿಕಟ್ಟೆ ನಾಗರಾಜು, ನಟರಾಜು, ಜಗದೀಶ್, ಹನುಮಂತಪ್ಪ ನರಸಿಂಹಪ್ಪ ಉಪಸ್ಥಿತರಿದ್ದರು.

# ನ, 25 ರಂದು ಎಸ್ಸಿ, ಎಸ್ಟಿ ಐಕ್ಯತ ಸಮಾವೇಶ

» **ಚಿತ್ರದುರ್ಗ**



ಅಂಬೇಡ್ಕರ್ ಸ್ವಾಭಿಮಾನಿ ಸೇನೆಯವತಿಯಿಂದ ರಾಜಕೀಯ ಜಾಗೃತಿಗಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಐಕ್ಯತಾ ಸಮಾವೇಶವು ನ, 25 ರಂದು ಬೆಂಗಳೂರಿನ ವಸಂತನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ರಾಜ್ಯ ಕಾರ್ಯದರ್ಶಿ ಹಾಗೂ ಜಿಲ್ಲಾಧ್ಯಕ್ಷರಾದ ಕೆ.ರಾಮಚಂದ್ರ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಲಿತರಿಗೆ ರಾಜಕೀಯವಾಗಿ ಅನ್ಯಾಯವಾಗಿದೆ ಯಾವ ಪಕ್ಷಗಳು ಸಹಾ ದಲಿತರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲು ಮುಂದೆ ಬರುತ್ತಿಲ್ಲ ದಲಿತರನ್ನು ಬರೀ ಮತ ನೀಡುವುದಕ್ಕೆ ಮಾತ್ರವೇ ಸೀಮಿತ ಮಾಡಿದ್ದಾರೆ ಹೆಂಡ, ತುಂಡನ್ನು ನೀಡಿದರೆ ಸಾಕು ನಮಗೆ ಮತವನ್ನು ನೀಡುತ್ತಾರೆ ಎಂದು ರಾಜಕೀಯ ಪಕ್ಷಗಳ ಮುಖಂಡರಲ್ಲಿ ಭಾವನೆ ಇದೆ.

ದಲಿತರ ಮೇಲೆ ದೌರ್ಜನ್ಯ, ಹಲ್ಲೆ, ಅತ್ಯಾಚಾರಗಳು ದಬ್ಬಾಳಿಕೆಗಳು ನಿರಂತರವಾಗಿ ನಡೆಯುತ್ತಿವೆ ಇದನ್ನು ಕಂಡ ಸರ್ಕಾರವೂ ಸಹಾ ಕಣ್ಣು ಮುಚ್ಚಿ ಕುಳಿತ್ತಿದೆ, ದಲಿತರ ಸಹಾಯಕ್ಕೆ ಬಂದಿಲ್ಲ, ನಮ್ಮ ಮೇಲೆ ದೌರ್ಜನ್ಯ ಮಾಡಿದವರ ಮೇಲೆ ಪೋಲಿಸ್ ಠಾಣೆಯಲ್ಲಿ ದೂರು ನೀಡಲು ಹೋದರೆ ಅವರು ಸಹಾ ದೂರನ್ನು ತೆಗೆದುಕೊಳ್ಳುತ್ತಿಲ್ಲ ಒಮ್ಮೆ ಪಡೆದರು ಸಹಾ ಆರೋಪಿಗಳ ಮೇಲೆ ಸರಿಯಾದ ಕ್ರಮವನ್ನು ಜರುಗಿಸುತ್ತಿಲ್ಲ ಎಂದು ದೂರಿದರು.

ನ. 25 ರಂದು ನಡೆಯುವ ಸಮಾವೇಶದಲ್ಲಿ ಸಚಿವರುಗಳಾದ ಮಹದೇವಪ್ಪ, ಮುನಿಯಪ್ಪ ಸೇರಿದಂತೆ ಇತರೆ ರಾಜಕೀಯ ನಾಯಕರುಗಳು ಭಾಗವಹಿಸಲಿದ್ದಾರೆ, ಚಿತ್ರದುರ್ಗ ಜಿಲ್ಲೆಯ ಪ್ರತಿ ತಾಲ್ಲೂಕಿನಿಂದಲೂ ಒಂದು ಬಸ್‌ನ್ನು ಬಿಡಲಾಗುವುದು ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷರಾದ ತಿಪ್ಪೇಸ್ವಾಮಿ, ಚಳ್ಳಕೆರೆ ತಾಲ್ಲೂಕು ಅಧ್ಯಕ್ಷರಾದ ವಿನೋದ್ ಕುಮಾರ್, ಹೊಳಲ್ಕೆರೆ ತಾ.ಅಧ್ಯಕ್ಷರಾದ ತಿಪ್ಪೇಶ್, ಹಿರಿಯೂರು ತಾ.ಅಧ್ಯಕ್ಷರಾದ ರಾಘವೇಂದ್ರ ಕಾರ್ಯಾಧ್ಯಕ್ಷರಾದ ಸಾಧಿಕ್ , ಲಕ್ಷ್ಮೀಕಾಂತ ಸೇರಿದಂತೆ ಇತರರು ಭಾಗವಹಿಸಿದ್ದರು.



ರಾಜ್ಯದಲ್ಲಿ ನಡೆಯುತ್ತಿರುವ ಉಪ ಚುನಾವಣೆಯಲ್ಲಿ ಶಿಗ್ಗಾವಿಯಲ್ಲಿ ಸ್ಪರ್ದೆ ಮಾಡಿರುವ ಬಿಜೆಪಿ ಅಭ್ಯರ್ಥಿ ಭರತ ಬೋಮ್ಮಾಯಿಯವರ ಪರವಾಗಿ ಕ್ಷೇತ್ರದ ಧುಂಡಶಿ, ಕೋನನಕೆರ ಮತ್ತು ಮುಗಳಿಕಟ್ಟಿ ಗ್ರಾಮಗಳಿಗೆ ಬೇಟಿ ನೀಡಿದ ಚಿತ್ರದುರ್ಗದ ಸಂಸದರು, ಮಾಜಿ ಉಪ ಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳರವರು ಪ್ರಚಾರವನ್ನು ಮಾಡಿದರು. ಕೇಂದ್ರ ಸರ್ಕಾರ ಕಳೆದ 11 ವರ್ಷದಲ್ಲಿ ಮಾಡಿದ ವಿವಿಧ ರೀತಿಯ ಕಾರ್ಯಕ್ರಮ, ಯೋಜನೆ, ಸಾಧನೆಗಳನ್ನು ಹಾಗೂ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಮಾಡಿದ ವಿವಿಧ ಕಾರ್ಯಕ್ರಮಗಳನ್ನು ಮತದಾರರಿಗೆ ತಿಳಿಸುವುದರ ಮೂಲಕ ಮತಯಾಚನೆಯನ್ನು ಮಾಡಿದರು.

## ವಕ್ಫ್ ಮಂಡಳಿ ಮುಚ್ಚುವಂತೆ ಆಗ್ರಹ



» **ಚಿತ್ರದುರ್ಗ**

ರಾಜ್ಯ ವಕ್ಫ್ ಮಂಡಳಿ ಮುಚ್ಚುವಂತೆ ಆಗ್ರಹಿಸಿ ಕರ್ನಾಟಕ ನವ ನಿರ್ಮಾಣ ಸೇನೆ ಚಿತ್ರದುರ್ಗ ನಗರದಲ್ಲಿಂದು ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ನವ ನಿರ್ಮಾಣ ಸೇನೆ ಚಿತ್ರದುರ್ಗ ಜಿಲ್ಲಾ ಘಟಕದ ವತಿಯಿಂದ ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಓಬವ್ವ ವೃತ್ತದ ಬಳಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದ್ದಾರೆ.

ನಾಡಿನ ಅನ್ನದಾತರ ಜಮೀನು, ಶಾಲೆ, ಆಧ್ಯಾತ್ಮ ಕೇಂದ್ರಗಳು, ಮಠಗಳು, ದೇವಸ್ಥಾನ ಸೇರಿದಂತೆ ಸಾರ್ವಜನಿಕ ಸ್ಥಳಗಳನ್ನು ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ನೋಟಿಸ್ ನೀಡಿ ಸಾವಿರಾರು ಎಕರೆ ಜಾಗವನ್ನು ಕಬಳಿಸಿರುವ ಕ್ರಮವನ್ನು ಕರ್ನಾಟಕ ನವನಿರ್ಮಾಣ ಸೇನೆ ಘಟಕದ ವತಿಯಿಂದ ಖಂಡಿಸಿದ್ದಾರೆ. ತಲಾ ತಲಾಂತರುಗಳಿಂದ ತಮ್ಮ ಪಿತ್ರಾರ್ಜಿತ ಆಸ್ತಿಯಲ್ಲಿ ಉಳುಮೆ ಮಾಡುತ್ತಿರುವ ಅನ್ನದಾತನ ಜಮೀನಿನ ಪಹಣಿಯಲ್ಲಿ ಏಕಾಏಕಿ ವಕ್ಫ್ ಬೋರ್ಡ್ ಮಾಲಿಕತ್ವ ಎಂದು ದಾಖಲಾಗುತ್ತಿರುವುದು ಆಶ್ಚರ್ಯ ಸಾವಿರಾರು ವರ್ಷಗಳಿಂದ ಸಮಾನತೆಯ ಸಮಾಜ ಕಟ್ಟುವಲ್ಲಿ ಶ್ರಮಿಸುತ್ತಿರುವ ಮಠಗಳ ಆಸ್ತಿಗಳು ಈ ವಕ್ಫ್ ಮಾಲೀಕತ್ವದ ಹೆಸರಿನಲ್ಲಿ ಗುರುತಿಸುವಂತಹ ಕೆಟ್ಟ ಪರಿಸ್ಥಿತಿ ರಾಜ್ಯದಲ್ಲಿ ನಡೆಯುತ್ತಿದೆ. ಇನ್ನೂ ರಾಜ್ಯ ಸರ್ಕಾರದ ಆದೇಶದ ಮೇರೆಗೆ ಅಧಿಕಾರಿಗಳು ಈ ಕೆಲಸ ಮಾಡುತ್ತಿರುವುದು ನಾಚಿಕೆಗೇಡು. ಮತ ಬ್ಯಾಂಕ್ ರಾಜಕಾರಣಕ್ಕೆ, ನಾಡಿನ ಉಳುವಾ ಯೋಗಿ, ಅನ್ನದಾನ, ಜ್ಞಾನ ದಾನ, ವಿದ್ಯಾದಾನ ಮಾಡಿರುವ ಮಠಗಳ ಮೇಲೆ ವಕ್ಫ್ ಸವಾರಿ ಮಾಡಿಸಲು ಮುಂದಾಗಿರುವ ರಾಜಕಾರಣಿಗಳ ಧಿಕ್ಕಾರವಿದೆ ಎಂದು ಪ್ರತಿಭಟನೆ ಮೂಲಕ ಆಗ್ರಹಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2024-25ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆಅಲೆಮಾರಿ, ವಿದ್ಯಾರ್ಥಿಗಳಿಂದ ಅರ್ಹ ಪಿ.ಯು.ಸಿ ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ನಂತರದ ವಿದ್ಯಾರ್ಥಿ ವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಕೆ ಅವಧಿಯನ್ನು ಇದೇ ನ.10 ರವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳ ಸಮಯೋಚಿತ ಕ್ರಮ

# ಅಪ್ರಾಪ್ತ ಬಾಲಕಿ ವಿವಾಹಕ್ಕೆ ತಡೆ: ಸಮಿತಿಯಲ್ಲಿ ವಿಚಾರಣೆ

» **ಚಳ್ಳಕೆರೆ**



ನಗರದ ಖಾಸಗಿ ಕಲ್ಯಾಣಮಂಟಪದಲ್ಲಿ ಬಾಲ್ಯವಿವಾಹವೊಂದು ನಡೆಯುತ್ತಿರುವ ಬಗ್ಗೆ ಮಾಹಿತಿ ಪಡೆದ ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿಗಳು ಪೊಲೀಸ್ ಇಲಾಖೆ ಸಹಕಾರದೊಂದಿಗೆ ಸ್ಥಳಕ್ಕೆ ಆಗಮಿಸಿ ಬಾಲ್ಯವಿವಾಹ ತಡೆಯುವುದರಲ್ಲಿ ಯಶಸ್ವಿಯಾಗಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಹರಿಪ್ರಸಾದ್, ಗುರುವಾರ ಬೆಳಗ್ಗೆ 9ರ ಸಮಯದಲ್ಲಿ ಬಾಲ್ಯವಿವಾಹ ನಡೆಸುತ್ತಿರುವ ಬಗ್ಗೆ ಸಾರ್ವಜನಿಕರಿಂದ ಮಾಹಿತಿ ಬಂದಕೂಡಲೇ ಜಾಗೃತಗೊಂಡ ಅಧಿಕಾರಿಗಳ ತಂಡ ಸ್ಥಳಕ್ಕೆ ಭೇಟಿ ನೀಡಿದಾಗ ಅಪ್ರಾಪ್ತ ಬಾಲಕಿಗೆ ಮಾಂಗಲ್ಯಧಾರಣೆಯಾಗುವ ಸಿದ್ದತೆಗಳು ಕಂಡುಬಂದವು. ಚಿತ್ರದುರ್ಗ ತಾಲ್ಲೂಕು ಕಲ್ಲಹಳ್ಳಿ ಗೊಲ್ಲರಹಟ್ಟಿಯ ಸಿದ್ದಮ್ಮ, ಜಡಿಯಪ್ಪನವರ ದ್ವಿತೀಯ ಪುತ್ರಿಯ ವಿವಾಹ ಕಾರ್ಯ ನಡೆಯುತ್ತಿದ್ದು, ಇನ್ನು ಕೆಲವೇ ನಿಮಿಷಗಳಲ್ಲಿ ಮಾಂಗಲ್ಯಧಾರಣೆಯಾಗುತ್ತಿತ್ತು ಎನ್ನಲಾಗಿದೆ. ತಾಲ್ಲೂಕಿನ ಸಾಣಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆ ಮುಂದಲಹಟ್ಟಿಯ ಸಿದ್ದವೀರಮ್ಮ, ಸಿದ್ದಪ್ಪನವರ ಪುತ್ರ ಎಸ್.ಶಿವುನೊಂದಿಗೆ ನಡೆಯಲಿದ್ದು, ವಿವಾಹಕ್ಕೆ ಸಿದ್ದವಿದ್ದ ಅಪ್ರಾಪ್ತ ಬಾಲಕಿಯ ವಯಸ್ಸು ಕೇವಲ 17 ವರ್ಷ 10 ತಿಂಗಳಾಗಿತ್ತು. ಈ ಬಗ್ಗೆ ಸಿಡಿಪಿಒ ಹರಿಪ್ರಸಾದ್ ಬಾಲಕಿಯ (ವಧು) ಪೋಷಕರಿಗೆ ಮತ್ತು ವರನ ಕಡೆಯವರಿಗೆ ಕಾನೂನಿನ ಬಗ್ಗೆ ಮಾಹಿತಿ ನೀಡಿ ಮದುವೆಯನ್ನು ತಡೆದರಲ್ಲದೆ, ಬಾಲಕಿಯನ್ನು ಪೋಷಕರೊಂದಿಗೆ ಇಲಾಖೆಯ ಸಿಬ್ಬಂದಿಯೊಂದಿಗೆ ಚಿತ್ರದುರ್ಗದ ಮಕ್ಕಳ ಕಲ್ಯಾಣ ಸಮಿತಿಗೆ ಕಳಿಸಿಕೊಟ್ಟಿದ್ದು ಅಲ್ಲಿ ವಿಚಾರಣೆ ಮುಂದುವರೆದಿದೆ. ಒಟ್ಟಿನಲ್ಲಿ ಇಲ್ಲಿನ ಸಿಡಿಪಿಒ ಮತ್ತು ಸಿಬ್ಬಂದಿ ವರ್ಗದ ಸಕಾಲಿಕ ಕ್ರಮದಿಂದ ಬಾಲ್ಯವಿವಾಹವನ್ನು ರದ್ದುಪಡಿಸಿ ಅಪ್ರಾಪ್ತ ಬಾಲಕಿಗೆ ಮಕ್ಕಳ ಕಲ್ಯಾಣ ಸಮಿತಿವತಿಯಿಂದ ಸೂಕ್ತ ಮಾರ್ಗದರ್ಶನ ನೀಡಲಾಗಿದೆ ಎನ್ನಲಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T